ಸಂಪುಟ : 9 ಸಂಚಿಕೆ 155 ಪುಟ : 4 ಬೆಲೆ: 3.00 ಗುರುವಾರ ಜುಲೈ 25 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 155 Pages : 4 Price : 3.00 Thursday July 25 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜುಲೈ 25ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 34. 35. 1, 2, 3 ನೇ ಕ್ರಾಸ್‌ಗಳು, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 ಗಂಗಿಮಡಿ 1ರಿಂದ 5ನೇ ಕ್ರಾಸ್‌ವರೆಗೆ. ವಾರ್ಡ್ ನಂ. 21, 22, 23 ಕಮತರ ಲೈನ್, ಹನುಮಾನ ಗರಡಿ, ದ್ರೌಪತಿ ಬಾಯಿ, ವಿಭೂತಿ ಓಣಿ ಭಾಗ -1,2, ಪಡಗದ ಭಾಗ -1,2, ಜಂತ್ಲಿ ಅವರ ಲೈನ್, ಹೊಸ ಲೈನ್ ಹಾಗೂ ಹಳೇ ಲೈನ್, ಕುಂಬಾರ ಓಣಿ, ದ್ಯಾಮವ್ವನ ಕಟ್ಟಿ, ಗಂಜಿ ಬಸವೇಶ್ವರ ಸರ್ಕಲ್, ಬನ್ನಿ ಕಾಳಮ್ಮ ಗುಡಿ ಲೈನ್.

ವಾರ್ಡ್ ನಂ. 29 ಶಿಕ್ಷಕರ ಬಡಾವಣೆ, ಕಾರಂತ ಹೋಟೆಲ್, ಪರಶುರವರ ಲೈನ್, ಬನ್ನಿ ಕಟ್ಟಿ, ಹುಡ್ಕೋ ಭಾಗ, ನೆಲ್ಸನ್ ಮಂಡೇಲಾ, ಪಾಮಡೆಯವರ ಲೈನ್, ಮೆಂಬರ್ ಲೈನ್, ಗಾರ್ಡನ್ ಲೈನ್, ಪೋಲಿಸ್ ಸ್ಟೇಷನ್, ಗುಂಪಿನ ಮನೆ, ಕಲಾಮಂದಿರ ರೋಡ್, ಉರ್ದು ಶಾಲೆ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಬಾಂಧವರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ಮುಂಗಾರು ಅವಧಿಗೆ ಗದಗ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ನೀರಾವರಿ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆ ವಿಮೆ ಕಂತು ಪಾವತಿಗೆ ಜುಲೈ 31ರಂದು ಕೊನೆಯ ದಿನವಾಗಿದೆ.


ಮಳೆಯಾಶ್ರಿತ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ಆಗಸ್ಟ್ 16ರಂದು ಕೊನೆಯ ದಿನವಾಗಿದೆ.

ರೈತರು ವಿಮೆಗೆ ನೋಂದಾಯಿಸಿಕೊಳ್ಳಲು ಅರ್ಜಿ ಪತ್ರ, ಪಹಣಿ, ಆಧಾರ್ ಸಂಖ್ಯೆ ಜೋಡಿಸಿದ ಬ್ಯಾಂಕ್ ಖಾತೆ ಪುಸ್ತಕದ ನಕಲು ಪ್ರತಿ ಹಾಗೂ ಸ್ವಯಂ ಘೋಷಿತ ಬೆಳೆ ದೃಢೀಕರಣ ಪತ್ರದೊಂದಿಗೆ ರಾಷ್ಟ್ರೀಕೃತ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಕೇಂದ್ರಗಳಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಇಲಾಖೆ , ಕೃಷಿ ಇಲಾಖೆ ಕಚೇರಿಗಳಿಗೆ ಭೇಟಿ ನೀಡಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ನಾಡಿಗೆ ನಿರಾಶಾದಾಯಕ ಬಜೆಟ್

**■ವಿಜಯಸಾಕ್ಷಿ ಸುದ್ದಿ, ರೋಣ**



ಕೇಂದ್ರ ಸರಕಾರ ಮಂಡಿಸಿರುವ ಬಜೆಟ್ ಕನ್ನಡ ನಾಡಿಗೆ ನಿರಾಶಾದಾಯಕವಾಗಿದ್ದು, ಯಾವುದೇ ಮಹತ್ವದ ಯೋಜನೆಗಳು ರಾಜ್ಯಕ್ಕೆ ಸಿಕ್ಕಿಲ್ಲ ಎಂದು ಖನಿಜ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.

ಅವರು ಈ ಬಗ್ಗೆ ಮಾತನಾಡಿ, ರಾಜ್ಯವು ದೇಶದ ಅಭಿವೃದ್ಧಿಗೆ ತನ್ನದೇ ಆದ ಕೊಡುಗೆ ನೀಡಿದೆ ಎಂಬುದನ್ನು ಕೇಂದ್ರ ಸರಕಾರ ಮರೆತಂತಿದೆ. ರಾಜ್ಯದ ಜನತೆಯ ಹಲವಾರು ಬೇಡಿಕೆಗಳಿದ್ದು, ಅವುಗಳನ್ನು ಈಡೇರಿಸುವುದು ಕೇಂದ್ರ ಸರಕಾರದ ಕರ್ತವ್ಯವೂ ಹೌದು. ಹಿಗಿದ್ದರೂ ಸಹ ಬಜೆಟ್‌ನಲ್ಲಿ ನಮಗೆ ಅನ್ಯಾಯ ಮಾಡಲಾಗಿದೆ ಎಂದ ಅವರು, ನಾಡಿನ ಸಂಸದರು ಪಕ್ಷಾತೀತವಾಗಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು.

ರಾಜ್ಯದಲ್ಲಿ ರೈಲು ಯೋಜನೆಗಳಿಗೆ ಪ್ರಗತಿ, ರಾಷ್ಟ್ರೀಯ ಹೆದ್ದಾರಿ ಸೇರಿದಂತೆ ಇತರೆ ಯೋಜನೆಗಳ ಬಗ್ಗೆ ಬಜೆಟ್‌ನಲ್ಲಿ ಗಮನ ಹರಿಸಿಲ್ಲ. ಅಲ್ಲದೆ ನೀರಾವರಿ ಯೋಜನೆಗಳ ಬಗ್ಗೆಯೂ ಯಾವುದೇ ಯೋಜನೆಗಳಿಲ್ಲ. ಮುಖ್ಯವಾಗಿ, ಮಹದಾಯಿ ವಿಷಯ ಕೂಡ ಪ್ರಸ್ತಾಪವಾಗದಿರುವುದು ದುರಂತ. ಒಟ್ಟಿನಲ್ಲಿ ಇದೊಂದು ನಮ್ಮ ನಾಡಿಗೆ ನಿರಾಶಾದಾಯಕ ಬಜೆಟ್ ಆಗಿದೆ ಎಂದ ಅವರು, ನಮ್ಮ ರಾಜ್ಯದ ಸರ್ವ ಸಂಸದರು ಹೆಚ್ಚಿನ ಅನುದಾನವನ್ನು ತರುವ ಮೂಲಕ ನಾಡಿನ ಜನರ ಬೇಡಿಕೆ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

### ಸ್ವಾತಂತ್ರ್ಯೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ

## ರಾಷ್ಟ್ರೀಯ ಹಬ್ಬವನ್ನು ಸಂಭ್ರಮದಿಂದ ಆಚರಿಸೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಆಗಸ್ಟ್ 15ರಂದು ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಶಿಸ್ತು ಹಾಗೂ ಸಂಭ್ರಮದಿಂದ ಯಾವುದೇ ಲೋಪದೋಷಗಳಿಲ್ಲದಂತೆ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ವಿವಿಧ ಇಲಾಖೆಗಳ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಸ್ವಾತಂತ್ರ್ಯೋತ್ಸವ ದಿನಾಚರಣೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಗಸ್ಟ್ 14 ಹಾಗೂ 15ರಂದು ಎರಡು ದಿವಸಗಳ ಕಾಲ ಜಿಲ್ಲಾಡಳಿತ ಭವನದ ಸೇರಿದಂತೆ ವಿವಿಧ ಸರ್ಕಾರಿ ಕಟ್ಟಡಗಳು, ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಬೇಕು. ಸ್ವಾತಂತ್ರ್ಯೋತ್ಸವದ ಪ್ರಯುಕ್ತ ಆ. 15ರಂದು ಬೆಳಿಗ್ಗೆ 7.30 ಗಂಟೆಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿಗಳಿಂದ ಧ್ವಜಾರೋಹಣ ಕಾರ್ಯಕ್ರಮ ಜರುಗುವುದು. ನಂತರ ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ



ಕಾರ್ಯಕ್ರಮ ಜರುಗಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಲಿದ್ದಾರೆ. ಅಂದು ಶಾಲಾ ಕಾಲೇಜು ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಸಮಯಕ್ಕೆ ಸರಿಯಾಗಿ ಕ್ರೀಡಾಂಗಣದಲ್ಲಿ ಹಾಜರಿರಬೇಕು. ನಗರದ ಜಿಲ್ಲಾ ಕ್ರೀಡಾಂಗಣ ಹಾಗೂ ಪ್ರಮುಖ ವೃತ್ತಗಳ ಸ್ವಚ್ಛತೆಗೆ ನಗರಸಭೆ ಪೌರಾಯುಕ್ತರು ಕ್ರಮ ವಹಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಮಾಡಲಾಗುತ್ತದೆ. ಆ ಸಂದರ್ಭದಲ್ಲಿ ಸನ್ಮಾನಿತರಿಗಾಗಿ ಪ್ರತ್ಯೇಕವಾಗಿ ಮುಂಚಿತವಾಗಿಯೇ ನಿಗದಿತ ಆಸನದ ವ್ಯವಸ್ಥೆ ಮಾಡಿದರೆ ಅವರನ್ನು ಕರೆತಂದು ಸನ್ಮಾನ ಸಮಾರಂಭ ಜರುಗಿಸಲು ಸುಲಭವಾಗುತ್ತದೆ ಎಂದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆಯ ದಿನ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಪ್ರಾರಂಭವಾಗುವದಕ್ಕಿಂತ ಮುಂಚೆಯೇ ಎಲ್ಲ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ನಿಗದಿತ ಸ್ಥಾನಗಳಲ್ಲಿ ಉಪಸ್ಥಿತರಿದ್ದು ಶಿಸ್ತಿನಿಂದ ತಮ್ಮ ಕಾರ್ಯ ನಿರ್ವಹಿಸಬೇಕು. ಅಂದಾಗ ಕಾರ್ಯಕ್ರಮದಲ್ಲಿ ಗೊಂದಲಗಳಾಗದಂತೆ ಅಚ್ಚುಕಟ್ಟಾಗಿ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದ ಸಂದರ್ಭದಲ್ಲಿ ವಿವಿಧ ರಂಗಗಳಲ್ಲಿ ಸಾಧನೆ ಮಾಡಿದವರಿಗೆ ಸನ್ಮಾನಕ್ಕೆ ಆಯಾ ಇಲಾಖಾಧಿಕಾರಿಗಳು ಕ್ರಮ ವಹಿಸಬೇಕು. ಒಟ್ಟಾರೆಯಾಗಿ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ವಿಶೇಷ ಆಸಕ್ತಿಯಿಂದ ಆಚರಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.



> ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಜರುಗಲಿದ್ದು, ಗಣ್ಯ ವ್ಯಕ್ತಿಗಳಿಗೆ ಶಿಷ್ಟಾಚಾರದನ್ವಯ ಆಸನದ ವ್ಯವಸ್ಥೆ ಹಾಗೂ ಸನ್ಮಾನ ಕಾರ್ಯಕ್ರಮಕ್ಕೂ ಸಹ ಸೂಕ್ತ ಆಸನದ ವ್ಯವಸ್ಥೆಗೆ ಕ್ರಮ ಕೈಗೊಳ್ಳಬೇಕು. ಜಿಲ್ಲಾ ಕ್ರೀಡಾಂಗಣ ಸೇರಿದಂತೆ ಪ್ರಮುಖ ಬೀದಿ ಹಾಗೂ ವೃತ್ತಗಳ ಸ್ವಚ್ಛತೆ ಕುರಿತು ನಗರಸಭೆ ಪೌರಾಯುಕ್ತರು ನಿಗಾ ವಹಿಸಬೇಕು. ಕಾರ್ಯಕ್ರಮದ ದಿನ ತುರ್ತು ಸೇವೆಗಾಗಿ ಆಂಬ್ಯುಲೆನ್ಸ್ ವ್ಯವಸ್ಥೆಗೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ರಾಷ್ಟ್ರೀಯ ಹಬ್ಬವಾದ ಸ್ವಾತಂತ್ರ್ಯೋತ್ಸವ ಸಮಾರಂಭವನ್ನು ಅತ್ಯಂತ ಕಾಳಜಿಯಿಂದ ಆಚರಿಸಲು ಕ್ರಮ ವಹಿಸಬೇಕು.
>
> **– ಗೋವಿಂದರೆಡ್ಡಿ.**
> ಗದಗ ಜಿಲ್ಲಾಧಿಕಾರಿಗಳು.

ಆಮಂತ್ರಣ ಪತ್ರಿಕೆ ಮುದ್ರಣ, ಅಲ್ಪೋಪಹಾರದ ವ್ಯವಸ್ಥೆ, ಪರೇಡ್ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ, ಧನಿವರ್ಧಕ ಸೇರಿದಂತೆ ಕಾರ್ಯಕ್ರಮದ ವೇದಿಕೆ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಎನ್‌ಸಿಸಿ ಅಧಿಕಾರಿ ಕರ್ನಲ್ ರೂಪೇಂದ್ರ ಸಿಂಗ್, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ. ರಡ್ಡೇರ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಕುರ್ತಕೋಟಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರವಿ ಗುಂಜೀಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಸುಬೇದಾರ ಮೇಜರ್ ಮಲ್ಲಪ್ಪ ಬ್ಯಾಳಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಕ್ರೀಡೆಗಳಿಂದ ಆರೋಗ್ಯ ವೃದ್ಧಿ: ಡಾ. ಶಿರೋಳ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸ್ತುತ ದಿನಗಳಲ್ಲಿ ಯುವ ಪೀಳಿಗೆ ಕ್ರೀಡೆಗಳಿಂದ ದೂರ ಉಳಿದಿದ್ದು, ಅಸಂಬದ್ಧ ಆಹಾರ ಪದ್ಧತಿ, ಜೀವನ ಶೈಲಿ, ಅತಿಯಾದ ಮೊಬೈಲ್ ಬಳಕೆಯಿಂದ ಕಡಿಮೆ ವಯಸ್ಸಿನ ಯುವಕ/ಯುವತಿಯರಲ್ಲಿ ಮಧುಮೇಹ, ರಕ್ತದೊತ್ತಡ, ಹೃದಯದ ಖಾಯಿಲೆಗಳು ಕಂಡುಬರುತ್ತಿವೆ. ನಿಯಮಿತವಾಗಿ ವ್ಯಾಯಾಮ ಹಾಗೂ ಕ್ರೀಡೆಗಳಿಂದ ಆರೋಗ್ಯವಂತರಾಗಿರಬಹುದು ಎಂದು ಖ್ಯಾತ ವೈದ್ಯ ಡಾ.ಜಗದೀಶ ಶಿರೋಳ ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದ ನೌಕರರ ಕ್ರೀಡಾಕೂಟದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ, ಪ್ರತಿ ವರ್ಷ ಸಂಸ್ಥೆಯ ನೌಕರರಿಗೆ ಕ್ರೀಡಾ ಮನೋಭಾವನೆ ಬೆಳೆಸುವ ದೃಷ್ಟಿಯಿಂದ ಹಾಗೂ ಒತ್ತಡದ ಕೆಲಸ ಕಾರ್ಯದಿಂದ ಹೊರಬರಲು ಸಂಸ್ಥೆಯ ಕ್ರೀಡೆ ಹಾಗೂ ಕಲಾ ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ. ಯೋಗ, ಧ್ಯಾನ ಮಾಡುವವದರೊಂದಿಗೆ ಪ್ರತಿ ದಿನ ಕ್ರೀಡೆಗಳಲ್ಲಿ ತೊಡಗಿಕೊಳ್ಳುವದರ ಮೂಲಕ ದಿನವಿಡೀ ಚೈತನ್ಯದಿಂದ ಕೂಡಿರಬಹುದೆಂದು ಅಭಿಪ್ರಾಯಪಟ್ಟರು.

ಕ್ರೀಡೆಯಲ್ಲಿ ವಿಭಾಗದ ಘಟಕಗಳಿಂದ ಚಾಲಕ, ನಿರ್ವಾಹಕ, ತಾಂತ್ರಿಕ ಹಾಗೂ ಆಡಳಿತ ಸಿಬ್ಬಂದಿಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಅಧಿಕಾರಿಗಳಾದ ಪಿ.ವೈ. ಗಡೇದ, ದೇವಕ್ಕಾ ನಾಯ್ಕು, ಬಿ.ಎಲ್. ಗೆಣ್ಣೂರ, ರೀಟಾ ಮಿರಜಕರ, ಆರ್.ಎಸ್. ಕಾಶೀಗೌಡ್ರ, ಕಾರ್ಮಿಕ ಮುಖಂಡರಾದ ಶಾಂತಣ್ಣ ಮುಳವಾಡ, ಸಂಗಣ್ಣವರ, ಅಮೃತೇಶ ಹೊಸಳ್ಳಿ, ಕ್ರೀಡಾಪಟುಗಳು, ಸಿಬ್ಬಂದಿಗಳು ಹಾಜರಿದ್ದರು. ಆರ್. ಎಸ್. ಕಾಶೀಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಟಿ. ದಾಮೋದರ ನಿರೂಪಿಸಿದರು. ಬಿಎಲ್. ಗೆಣ್ಣೂರ ವಂದಿಸಿದರು.

## ನಾಮನಿರ್ದೇಶಿತ ಸದಸ್ಯರ ಪದಗ್ರಹಣ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಯ ಸಭಾಭವನದಲ್ಲಿ ಗದಗ-ಬೆಟಗೇರಿ ನಗರಸಭೆಯ ನೂತನ ನಾಮನಿರ್ದೇಶಿತ ಸದಸ್ಯರ ಪದಗ್ರಹಣ ಕಾರ್ಯಕ್ರಮ ಬುಧವಾರ ಜರುಗಿತು. ನೂತನ ನಾಮನಿರ್ದೇಶಿತ ಸದಸ್ಯರಾದ ಮೋಹನ ಕಟ್ಟಿಮನಿ, ಬಾಬಾ ನರಸಾಪುರ, ದುರಗಪ್ಪ ವಿಭೂತಿ ಇವರನ್ನು ಮಾಜಿ ಶಾಸಕರಾದ ಡಿ.ಆರ್. ಪಾಟೀಲ ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಪ್ರಭು ಬುರಬುರೆ, ಗುರಣ್ಣ ಬಳಗಾನೂರ, ಎಲ್.ಡಿ. ಚಂದಾವರಿ, ಬಿ.ಬಿ. ಅಸೂಟಿ, ನಗರಸಭೆ ಸದಸ್ಯರಾದ ಸುರೇಶ ಕಟ್ಟಿಮನಿ, ಬರಕತಅಲಿ ಮುಲ್ಲಾ, ಎಸ್.ಎನ್. ಬಳ್ಳಾರಿ, ನಮಾಜಿ, ಸಿದ್ದಮ್ಮನಹಳ್ಳಿ, ಮುನ್ನಾ ರೇಶ್ಮಿ, ಅಶೋಕ ಮಂದಾಲಿ, ಮಾರ್ತಾಂಡಪ್ಪ ಹಾದಿಮನಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.

## ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕಣ್ಣು ಮನುಷ್ಯನ ದೇಹದಲ್ಲಿರುವ ಪ್ರಮುಖ ಅಂಗವಾಗಿದ್ದು, ಇದರ ಬಗ್ಗೆ ಕಾಳಜಿ ವಹಿಸಿ ವೈದ್ಯರ ಸಲಹೆಯಂತೆ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಅಮೃತ ಹರಿದಾಸ ಸಲಹೆ ನೀಡಿದರು.

ಇಲ್ಲಿಯ ಅನ್ನದಾನೀಶ್ವರ ಸಭಾಭವನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದಡಿ ಹಮ್ಮಿಕೊಂಡಿದ್ದ ಉಚಿತ ನೇತ್ರ, ರಕ್ತದೊತ್ತಡ, ಮಧುಮೇಹ ಪರೀಕ್ಷೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ವೃದ್ಧಾಪ್ಯದಲ್ಲಿ ಆವರಿಸುವ



ನೇತ್ರ ಸಮಸ್ಯೆ, ರಕ್ತದೊತ್ತಡ, ಮಧುಮೇಹ ರೋಗಗಳು 50ನೇ ವಯಸ್ಸಿನೊಳಗೇ ಕಾಡುತ್ತಿದ್ದು, ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳಬೇಕಿದೆ. ಸರಕಾರಿ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಲಭ್ಯವಿದ್ದು, ಸದುಪಯೋಗಪಡಿಸಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಹಿಳೆಯರ ಆರ್ಥಿಕ ಸಬಲೀಕರಣದ ಜೊತೆಗೆ ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಆರೋಗ್ಯ ಶಿಬಿರಗಳನ್ನು ಏರ್ಪಡಿಸಿ ಗ್ರಾಮದಲ್ಲಿ ಸಮಾಜಮುಖಿ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು. ನೇತ್ರ ತಪಾಸಣಾ ಅಧಿಕಾರಿ ಡಾ. ಶಿವಲಿಂಗಪ್ಪ ಕೊಡೆಕ್ಕಲ್ ನೇತ್ರ ರಕ್ಷಣೆ, ಕಣ್ಣಿನ ತಪಾಸಣೆ ಮಾಡಿದ ಬಳಿಕ ಇದರ ಚಿಕಿತ್ಸೆ, ಸರಕಾರದಿಂದ ದೊರೆಯುವ ಸೌಲಭ್ಯಗಳ ಕುರಿತು ವಿವರಿಸಿದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ವಿಶಾಲ ಮಲಪೂರ ಕಾರ್ಯಕ್ರಮ ಉದ್ಘಾಟಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಜಿಮ್ಸ್ ಆರೋಗ್ಯ ಸಿಬ್ಬಂದಿ ಬಿ.ಪಿ., ಶುಗರ್ ಪರೀಕ್ಷೆ ಮಾಡಿದರು. 9 ಜನರಿಗೆ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆಗೆ ಸಲಹೆ ನೀಡಿದರು. 85 ಫಲಾನುಭವಿಗಳು ಭಾಗವಹಿಸಿದ್ದರು. ಅನ್ನದಾನೀಶ್ವರ ಸೇವಾ ಸಮಿತಿಯ ಅಧ್ಯಕ್ಷ ಮಾರ್ಕಂಡಯ್ಯ ಗಡ್ಡದ ವೇದಿಕೆಯಲ್ಲಿದ್ದರು. ವಲಯ ಮೇಲ್ವಿಚಾರಕ ದಾದಾ ಕಾಲಂದಾರ ಸ್ವಾಗತಿಸಿದರು. ಜ್ಞಾನವಿಕಾಸ ಸಮನ್ವಯಾಧಿಕಾರಿ ಮಂಜುಳಾ ಜೈನ್ ನಿರೂಪಿಸಿದರು. ಗ್ರಾ.ಪಂ ಸದಸ್ಯೆ, ಸೇವಾ ಪ್ರತಿನಿಧಿ ರಜಿಯಾಬೇಗಂ ತಹಸೀಲ್ದಾರ ವಂದಿಸಿದರು.

## ಸಂಪಾದಕೀಯ

### ಗುಣಮಟ್ಟದ ಸೇವೆಗೆ ಖಾಲಿ ಹುದ್ದೆ ಭರ್ತಿ ಆಗಲೇಬೇಕು

ರಾಜ್ಯದ ಜನರಿಗೆ ಸರಕಾರದ ಸೌಲಭ್ಯಗಳು ಸಕಾಲದಲ್ಲಿ ಮತ್ತು ಗುಣಮಟ್ಟದಿಂದ ಸಿಗಬೇಕಾದರೆ ಸರಕಾರಿ ಹುದ್ದೆಗಳ ಭರ್ತಿ ಆಗಲೇಬೇಕು. ಹೀಗೆ ಹೇಳಿದವರು ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ.

ಹೌದು, ಸರಕಾರದ ಸೇವೆ ಜನರಿಗೆ ಸಿಗಬೇಕಾದರೆ ಕಾರ್ಯಾಂಗ ಸಶಕ್ತವಾಗಿರಬೇಕು. ಕಾರ್ಯಾಂಗ ಸದೃಢವಾಗಬೇಕಾದರೆ ಖಾಲಿ ಇರುವ ಹುದ್ದೆ ಭರ್ತಿ ಆಗಲೇಬೇಕು. 7.73 ಲಕ್ಷ ಹುದ್ದೆಗಳ ಪೈಕಿ 2.70 ಲಕ್ಷ ಹುದ್ದೆ ಖಾಲಿಯಿದ್ದು, ಆ ಹುದ್ದೆ ಭರ್ತಿಯಾಗದ ಹೊರತು ಜನರಿಗೆ ಗುಣಮಟ್ಟದ ಸೇವೆ ದೊರೆಯುವುದು ಕಷ್ಟ ಎನ್ನುವುದನ್ನು ಸರಕಾರಿ ನೌಕರರ ಸಂಘಟನೆಯೇ ಒಪ್ಪಿಕೊಂಡಿದೆ.

ಖಾಲಿ ಹುದ್ದೆ ಭರ್ತಿ ಸಮಸ್ಯೆ ದಶಕಗಳಿಂದಲೂ ಇದೆ. ಆದರೆ ದಿನ ಕಳೆದಂತೆ ಅದು ಬೃಹದಾಕಾರವಾಗಿ ಬೆಳೆಯುತ್ತಿದೆ. ಆದರೆ ಈಗಿನ ಸರಕಾರ ಹುದ್ದೆ ಭರ್ತಿ ಮಾಡುವುದಕ್ಕಿಂತ ಇರುವ ಹುದ್ದೆಗಳನ್ನು ಹೇಗೆ ತೆಗೆದು ಹಾಕಬೇಕು ಎನ್ನುವ ನಿಟ್ಟಿನಲ್ಲಿ ಪ್ರಯತ್ನ ನಡೆಸಿರುವುದು ಭವಿಷ್ಯದಲ್ಲಿ ಪರಿಸ್ಥಿತಿ ಇನ್ನಷ್ಟು ಗಂಭೀರವಾಗುವ ಸಾಧ್ಯತೆಯಿದೆ.

ಒಬ್ಬ ನೌಕರ ಪ್ರತಿನಿತ್ಯ ಸರಾಸರಿ 8 ಗಂಟೆ ಕೆಲಸ ಮಾಡಬೇಕು. ಪ್ರಾಮಾಣಿಕವಾಗಿ ಕೆಲಸ ಮಾಡುವವರು 8 ಗಂಟೆ ಕೆಲಸ ಮಾಡುತ್ತಾರೆ. ಎರಡ್ಮೂರು ಹುದ್ದೆಗಳನ್ನು ನಿಭಾಯಿಸುತ್ತಾರೆ. ಆದರೆ ಗುಣಮಟ್ಟ ಕಾಯ್ದುಕೊಳ್ಳಲು ಸಾಧ್ಯವಾಗುವುದಿಲ್ಲ. ಇನ್ನು ಭ್ರಷ್ಟ ಅಧಿಕಾರಿಗಳು ಸಹ 8 ಗಂಟೆ ಕೆಲಸ ಮಾಡುತ್ತಾರೆ. ಮೂರ್ನಾಲ್ಕು ಹುದ್ದೆಗಳ ಪ್ರಭಾರವನ್ನೂ ವಹಿಸಿಕೊಳ್ಳುತ್ತಾರೆ. ಆದರೆ ಅವರ ಉದ್ದೇಶ ಮಾತ್ರ ಬೇರೆ ಆಗಿರುತ್ತದೆ. ಇಂಥ ನೌಕರರು ಇರುವ ಕಡೆ ಗುಣಮಟ್ಟವನ್ನು ಕಿಂಚಿತ್ತೂ ನಿರೀಕ್ಷಿಸಲು ಸಾಧ್ಯ.

ಸರಕಾರ ಕಾಲಕಾಲಕ್ಕೆ ಹುದ್ದೆ ಭರ್ತಿಗೆ ಕ್ರಮ ಕೈಗೊಂಡಿದ್ದರೆ ಆರ್ಥಿಕವಾಗಿ ಅಷ್ಟೊಂದು ಹೊರೆಯಾಗುತ್ತಿರಲಿಲ್ಲ. ಸದ್ಯ 41 ಇಲಾಖೆಗಳ ಮಾಹಿತಿಯನ್ನು ಪರಿಗಣಿಸಿದರೆ ಶೇ. 35ರಷ್ಟು ಸರಾಸರಿ ಹುದ್ದೆಗಳು ಖಾಲಿ ಇದೆ. ಸರಕಾರಕ್ಕೆ ತನ್ನ ಐದು ವರ್ಷದ ಅವಧಿಯಲ್ಲಿ 1 ಲಕ್ಷ ಹುದ್ದೆ ಭರ್ತಿ ಮಾಡಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಅಂಥದ್ದರಲ್ಲಿ ಸದ್ಯ 2.7 ಲಕ್ಷ ಹುದ್ದೆ ಭರ್ತಿಯಾಗುವುದು ಕನಸಿನ ಮಾತು.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ಗ್ಯಾರಂಟಿ ಅನುಷ್ಠಾನಕ್ಕಾಗಿ ಹೆಣಗಾಡುತ್ತಿರುವಾಗ ಖಾಲಿ ಹುದ್ದೆ ಭರ್ತಿಗೆ ಮುಂದಾಗುವುದು ಕಷ್ಟಸಾಧ್ಯ. ಚುನಾವಣೆ ಪೂರ್ವದಲ್ಲಿಯೇ ಕಾಂಗ್ರೆಸ್ 1 ಲಕ್ಷ ಸರಕಾರಿ ಹುದ್ದೆ ಭರ್ತಿ ಮಾಡುವ ಗ್ಯಾರಂಟಿ ಒಂದನ್ನೇ ಕೊಟ್ಟಿದ್ದರೂ ರಾಜ್ಯದ ಜನ ಕಾಂಗ್ರೆಸ್ ಬೆಂಬಲಿಸುತ್ತಿದ್ದರು.

ಅಧಿಕಾರದ ಆಸೆಗಾಗಿ ಉಚಿತ ಕೊಡುಗೆ ಕೊಟ್ಟು ಗುಣಮಟ್ಟ ಕಾಯ್ದುಕೊಳ್ಳಲು ಸಾಧ್ಯವಾಗದೆ ಪರದಾಡುತ್ತಿದೆ. ಈ ಸಮಸ್ಯೆ ಪರಿಹಾರ ಸಾಧ್ಯವೇ ಇಲ್ಲ.

## ಬಿಜೆಪಿಯೇತರ ಆಡಳಿತದ ರಾಜ್ಯಗಳಿಗೆ ಬಜೆಟ್‌ನಲ್ಲಿ ತಾರತಮ್ಯ ಆರೋಪ; ಇಂಡಿಯಾ ಬಣದಿಂದ ಪ್ರತಿಭಟನೆ




■ ವಿಜಯಸಾಕ್ಷಿ ಸುದ್ದಿ, ನವದೆಹಲಿ

2024ರ ಕೇಂದ್ರ ಬಜೆಟ್ ಕುರಿತು ವಿರೋಧ ಪಕ್ಷದ ಇಂಡಿಯಾ ಬ್ಲಾಕ್‌ನ ಸಂಸದರು ಇಂದು ಸಂಸತ್ತಿನ ಆವರಣದಲ್ಲಿ ಪ್ರತಿಭಟನೆ ನಡೆಸಿದರು, ಅನೇಕ ಪಕ್ಷಗಳು ಬಿಜೆಪಿಯೇತರ ಆಡಳಿತದ ರಾಜ್ಯಗಳ ವಿರುದ್ಧ ಬಜೆಟ್‌ನಲ್ಲಿ "ತಾರತಮ್ಯ" ಮಾಡಲಾಗಿದೆ ಎಂದು ಆರೋಪ ಮಾಡಿವೆ.

ಪ್ರತಿಭಟನೆಯಲ್ಲಿ ಭಾಗವಹಿಸುವ ಪ್ರಮುಖ ನಾಯಕರಲ್ಲಿ ಕಾಂಗ್ರೆಸ್‌ನ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮತ್ತು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಇದ್ದರು.

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಮ್ಮ ಸತತ ಏಳನೇ ಬಜೆಟ್ ಮಂಡಿಸಿದ ನಂತರ ಪ್ರತಿಪಕ್ಷಗಳ ಕಾರ್ಯತಂತ್ರವನ್ನು ಚರ್ಚಿಸಲು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ರಾಜಾಜಿ ಮಾರ್ಗದ ನಿವಾಸದಲ್ಲಿ ಇಂಡಿಯಾ ಬ್ಲಾಕ್ ಪಕ್ಷಗಳ ನಾಯಕರು ಸಭೆ ಸೇರಿದ ಒಂದು ದಿನದ ನಂತರ ಬುಧವಾರದ ಈ ಬೆಳವಣಿಗೆ ನಡೆದಿದೆ.

ಖರ್ಗೆ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಕಾಂಗ್ರೆಸ್ ಸಂಸದರಾದ ರಾಹುಲ್ ಗಾಂಧಿ ಮತ್ತು ಕೆಸಿ ವೇಣುಗೋಪಾಲ್, ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷದ (ಎಸ್‌ಪಿ) ಮುಖ್ಯಸ್ಥ ಶರದ್ ಪವಾರ್, ಶಿವಸೇನೆ (ಯುಬಿಟಿ) ಸಂಸದರಾದ ಸಂಜಯ್ ರಾವುತ್ ಮತ್ತು ಅರವಿಂದ್ ಸಾವಂತ್, ಡಿಎಂಕೆ ಸಂಸದರಾದ ಟಿಆರ್ ಬಾಲು ಮತ್ತು ತಿರುಚಿ ಶಿವ, ಜಾರ್ಖಂಡ್ ಮುಕ್ತಿ ಮುಂತಾದ ನಾಯಕರು ಭಾಗವಹಿಸಿದ್ದರು.ತೃಣಮೂಲ ಕಾಂಗ್ರೆಸ್ ಸಂಸದ ಕಲ್ಯಾಣ್ ಬ್ಯಾನರ್ಜಿ, ಆಮ್ ಆದ್ಮಿ ಪಕ್ಷದ ಸಂಸದರಾದ ಸಂಜಯ್ ಸಿಂಗ್ ಮತ್ತು ರಾಘವ್ ಚಡ್ಡಾ ಇತರರು ಇದ್ದರು.

ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕೆ.ಸಿ.ವೇಣುಗೋಪಾಲ್, ಈ ಬಾರಿಯ ಕೇಂದ್ರ ಬಜೆಟ್‌ನಿಂದ ಈಗಾಗಲೇ ಬಜೆಟ್ ಪರಿಕಲ್ಪನೆಯನ್ನು ನಾಶಪಡಿಸಲಾಗಿದೆ, ಅವರು ಬಹುತೇಕ ರಾಜ್ಯಗಳನ್ನು ಸಂಪೂರ್ಣವಾಗಿ ತಾರತಮ್ಯ ಮಾಡಿದ್ದಾರೆ" ಎಂದರು.



ನಗರಸಭೆ ಆವರಣದಲ್ಲಿ ಬುಧವಾರ ಮಧ್ಯಾಹ್ನ ಅಪರೂಪದ ಘಟನೆ ನಡೆಯಿತು. ಬಾಯಾರಿಕೆಯಾಗಿದ್ದ ಕರಿಮಂಗನಿಗೆ ಬಿಜೆಪಿ ಅಲ್ಪಸಂಖ್ಯಾತ ಮುಖಂಡ ಬಾಬು ಯಲಿಗಾರ ಅವರು ಬಾಟಲ್ ಮೂಲಕ ನೀರು ಕುಡಿಸಿದರು. ಈ ದೃಶ್ಯವನ್ನು ಪಕ್ಕದಲ್ಲಿ ಇದ್ದ ಮತ್ತೊಬ್ಬರು ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದರು.

### ನರೇಗಲ್ ಪ.ಪಂಗೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ದಿಢೀರ್ ಭೇಟಿ

# ಪಟ್ಟಣದ ಅಭಿವೃದ್ಧಿಗೆ ಯೋಜನೆ ರೂಪಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಗದಗ ಜಿಲ್ಲೆಯ ನೂತನ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಇತ್ತೀಚೆಗೆ ನರೇಗಲ್ ಪಟ್ಟಣ ಪಂಚಾಯಿತಿಗೆ ದಿಢೀರ್ ಭೇಟಿ ನೀಡಿದರು. ಗಜೇಂದ್ರಗಡದಿಂದ ನರೇಗಲ್ಲ ಪಟ್ಟಣಕ್ಕೆ ಆಗಮಿಸಿದ ಅವರನ್ನು ಪ.ಪಂ ಮುಖ್ಯಾಧಿಕಾರಿ ರಮೇಶ ಹೊಸಮನಿ ಮತ್ತು ಸಿಬ್ಬಂದಿಯವರು ಸ್ವಾಗತಿಸಿದರು.

ಪಟ್ಟಣ ಪಂಚಾಯಿತಿಯ ಎಲ್ಲ ವಿಭಾಗಗಳನ್ನು ಭೇಟಿ ಮಾಡಿದ ಜಿಲ್ಲಾಧಿಕಾರಿಗಳು, ನರೇಗಲ್ ಪಟ್ಟಣ ಪಂಚಾಯಿತಿ ಅಭಿವೃದ್ಧಿಯಿಂದ ಹಿನ್ನಡೆ ಅನುಭವಿಸುತ್ತಿದ್ದು, ಪಟ್ಟಣದ ಅಭಿವೃದ್ಧಿಗೆ ಹೆಚ್ಚಿನ ಕರ ವಸೂಲಿ ಮಾಡಬೇಕೆಂದು ಪ.ಪಂ ಅಧಿಕಾರಿಗಳಿಗೆ ಹೇಳಿದರು.



ಪ.ಪಂ ಕಟ್ಟಡ ಹಾಗೂ ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಿ ದಾಖಲೆಗಳನ್ನು ಸಮರ್ಪಕವಾಗಿ ಇರಿಸಲು ತಿಳಿಸಿದರು. ಆದಾಯದ ಮೂಲವಾಗಿರುವ ವಾಣಿಜ್ಯ ಮಳಿಗೆಗಳನ್ನು ಆದಷ್ಟು ಬೇಗ ಟೆಂಡರ್ ಕರೆಯಬೇಕು. ಬರಬೇಕಾದ ಹಳೆಯ ಬಾಕಿ ಮೊತ್ತವನ್ನು ಪಾವತಿಸಲು ಅವರು ಹಿಂದೇಟು ಹಾಕಿದಲ್ಲಿ, ಆ ವ್ಯಾಪಾರಸ್ಥರ ಮನೆಗಳ ಮೇಲೆ ಭೋಜಾ ಕೂರಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

ಪ.ಪಂ ಸದಸ್ಯರು ಕಳೆದ ಒಂದು ವರ್ಷದಿಂದ ಪಟ್ಟಣ ಪಂಚಾಯಿತಿ ಅಧ್ಯಕ್ಷ- ಉಪಾಧ್ಯಕ್ಷ ಸ್ಥಾನ ತೆರವುಗೊಂಡರು ವ ಕುರಿತು ಪ್ರಶ್ನಿಸಿದರು. ಸದಸ್ಯರ ಪ್ರಶ್ನೆಗೆ ಜಿಲ್ಲಾಧಿಕಾರಿಗಳು ಉತ್ತರ ನೀಡಿ, ರಾಜ್ಯದ ಬಹುತೇಕ ಪಟ್ಟಣ ಪಂಚಾಯಿತಿ, ಪುರಸಭೆಗಳಲ್ಲಿ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳು ತೆರವುಗೊಂಡಿದ್ದು, ಸರ್ಕಾರ ಮೀಸಲಾತಿಯನ್ನು ಪ್ರಕಟಿಸುವ ಪ್ರಕ್ರಿಯೆಯಲ್ಲಿದೆ. ಸದಸ್ಯರ ಅವಧಿಯು ಇನ್ನೂ ಎರಡೂವರೆ ವರ್ಷ ಇದೆ. ಸದಸ್ಯರು ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗಬಾರದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಈರಪ್ಪ ಜೋಗಿ, ಮುತ್ತಪ್ಪ ನೂಲ್ಕಿ, ಕುಮಾರಸ್ವಾಮಿ ಕೋರಧ್ಯಾನಮಠ, ಶ್ರೀಶೈಲಪ್ಪ ಬಂಡಿಹಾಳ, ನಿಂಗಪ್ಪ ಚಲವಾದಿ, ಯಲ್ಲಪ್ಪ ಮಣ್ಣೊಡ್ಡರ, ಕಾರ್ಯನಿರ್ವಾಹಕ ಅಭಿಯಂತರ ಎಸ್.ಬಿ. ಮರಿಗೌಡ್ರ, ಅಭಿಯಂತರ ಉಮೇಶ ಓಜನಳ್ಳಿ, ಮುಖ್ಯಾಧಿಕಾರಿ ರಮೇಶ ಹೊಸಮನಿ, ಆರೋಗ್ಯ ನಿರೀಕ್ಷಕ ರಾಮಚಂದ್ರ ಕಜ್ಜಿ, ರಮೇಶ ಹಲಗಿಯವರ ಸೇರಿದಂತೆ ಸಾರ್ವಜನಿಕರು ಹಾಗೂ ಸಿಬ್ಬಂದಿಗಳು ಇದ್ದರು.

> ಈಗಾಗಲೇ ಸಾರ್ವಜನಿಕರಿಂದ ನರೇಗಲ್ಲ ಪಟ್ಟಣಕ್ಕೆ ಆಂಬ್ಯುಲೆನ್ಸ್ ಸೇವೆಯ ಅವಶ್ಯಕತೆ ಇರುವುದು ಗಮನಕ್ಕೆ ಬಂದಿದ್ದು, ಕೂಡಲೇ ಸಂಬಂಧಿಸಿದ ಆರೋಗ್ಯ ಇಲಾಖೆಯ ಡಿ.ಎಚ್.ಓ ಅವರನ್ನು ಸಂಪರ್ಕಿಸಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಆಂಬ್ಯುಲೆನ್ಸ್ ಒದಗಿಸುವ ಕುರಿತು ಕ್ರಮ ಕೈಗೊಳ್ಳುತ್ತೇನೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಭರವಸೆ ನೀಡಿದರು.

### ಗದಗ ಜಿಲ್ಲಾ ಮಟ್ಟದ ಎಸ್‌ಎಸ್‌ಕೆ ಸಮಾಜದ ಸಭೆ

# ಸಮಾಜದ ಅಭಿವೃದ್ಧಿಗೆ ನಿಗಮ ಅವಶ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಎಸ್‌ಎಸ್‌ಕೆ ಸಮಾಜದ ಆಶ್ರಯದಲ್ಲಿ ಪಟ್ಟಣದ ಶ್ರೀ ಅಂಭಾಭವಾನಿ ದೇವಸ್ಥಾನದಲ್ಲಿ ಗದಗ ಜಿಲ್ಲಾ ಮಟ್ಟದ ಎಸ್‌ಎಸ್‌ಕೆ ಸಮಾಜದ ಸಭೆಯು ಬುಧವಾರ ಜರುಗಿತು.

ಸಭೆಯಲ್ಲಿ ಹುಬ್ಬಳ್ಳಿಯ ಹನಮಂತಸಾ ನಿರಂಜನ ಮಾತನಾಡಿ, ಎಸ್‌ಎಸ್‌ಕೆ ಸಮಾಜವು ಸ್ವಾಭಿಮಾನಿಗಳಾಗಿ ಬದುಕು ಸಾಗಿಸುತ್ತಿದೆ. ಈ ಕೂಡಲೇ ಸರ್ಕಾರವು ಶೋಷಿತ ಸಮುದಾಯಗಳಲ್ಲಿ ಒಂದಾದ ಎಸ್‌ಎಸ್‌ಕೆ ಸಮಾಜಕ್ಕೆ ನಿಗಮ ಮಂಡಳಿ ರಚನೆ ಮಾಡಲೇಬೇಕು. ಇಲ್ಲದಿದ್ದಲ್ಲಿ ಸಮಾಜದವರು ಸಂಘಟಿತರಾಗಿ ಹೋರಾಟಕ್ಕಿಳಿಯಬೇಕಾಗುತ್ತದೆ ಎಂದು ಹೇಳಿದರು.

ಎಸ್.ಎಸ್.ಕೆ. ಸಮಾಜದ ಉಪಾಧ್ಯಕ್ಷ ನಾರಾಯಣಸಾ ಪವಾರ ಮಾತನಾಡಿ, ಎಸ್‌ಎಸ್‌ಕೆ ಸಮಾಜದ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ಮಂಡಳಿ ರಚನೆಯಾದರೆ ನಮ್ಮ ಸಮಾಜದ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಈಗಾಗಲೇ ಎಸ್‌ಎಸ್‌ಕೆ ಸಮಾಜ ಹಾಗೂ ಸಮಾಜದ ಹಲವಾರು ಅಂಗ ಸಂಸ್ಥೆಗಳೊಂದಿಗೆ ಹಲವು ಬಾರಿ ಜಿಲ್ಲಾಧಿಕಾರಿ ಕಚೇರಿ, ತಹಸೀಲ್ದಾರ್ ಕಚೇರಿ ಮತ್ತು ಶಾಸಕರ ಮುಖೇನ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆಂದರು.



ಕ್ಷತ್ರಿಯ ಫೌಂಡೇಶನ್ ಅಧ್ಯಕ್ಷ ಆರ್.ಟಿ. ಕಬಾಡಿ ಮತ್ತು ಶಂಕರಸಾ ಕಲಬುರ್ಗಿ ಮಾತನಾಡಿ, ಪೂರ್ವಭಾವಿ ಸಭೆ ಜುಲೈ 28ರ ಬೆಳಿಗ್ಗೆ 10.30ಕ್ಕೆ ಗದಗ ನಗರದ ಹಳೇ ಸರಾಫ್ ಬಜಾರದಲ್ಲಿರುವ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ನಡೆಯಲಿದ್ದು, ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿಲು ವಿನಂತಿಸಿದರು.

ಸಭೆಯಲ್ಲಿ ರಂಗನಾಥಸಾ ಬದಿ, ಪರಶುರಾಮಸಾ ಬದಿ, ಲಕ್ಷ್ಮಣ ಬದಿ, ಪಾಂಡುರಂಗಸಾ ಬದಿ, ಭರತ್ ಬಾಕಳೆ, ವೈ.ಎಫ್. ಬದಿ, ಅಶೋಕ್ ರಾಜೋಳ್ಳಿ, ಹನುಮಂತಸಾ ಚೌಧರಿ, ರಂಗನಾಥಸಾ ಬದಿ, ಪರಶುರಾಮಸಾ ಬದಿ, ಎಲ್ಲಮ್ಮ ಬಾಕಳೆ, ಮೀನಾಕ್ಷಿ ಬದಿ, ಲಕ್ಷ್ಮೀ ಬದಿ, ರೂಪಾ ರಾಜೋಳ್ಳಿ, ಶಾಂತಾಬಾಯಿ ಪವಾರ, ಸಂಜೀವ ಖಟವಟೆ, ರಾಜೇಶ ಭಾಂಡಗೆ, ಎಸ್‌ಎಸ್‌ಕೆ ಪಂಚ ಟ್ರಸ್ಟ್ ಕಮಿಟಿ ಸದಸ್ಯರು ಹಾಗೂ ಮಹಿಳಾ ಮಂಡಲ, ತರುಣ ಸಂಘ ಸದಸ್ಯರು ಉಪಸ್ಥಿತರಿದ್ದರು. ಲಕ್ಷ್ಮಣಸಾ ರಾಜೋಳ್ಳಿ ಸ್ವಾಗತಿಸಿದರು, ಕಾಶಿನಾಥಸಾ ಶಿದ್ಲಿಂಗ ಮತ್ತು ನಾಗರಾಜ ನಗರಿ ನಿರೂಪಿಸಿದರು.

# ಸಂಸತ್ತಿನ ಸಂಕೀರ್ಣದಲ್ಲಿ ರಾಹುಲ್ ಗಾಂಧಿ ಜತೆಗೆ ಸಭೆ ನಡೆಸಿದ ಪ್ರತಿಭಟನಾ ನಿರತ ರೈತರು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನೀತಿಯನ್ನು ಪರಿಷ್ಕರಿಸಲು ಸರ್ಕಾರವನ್ನು ಒತ್ತಾಯಿಸುತ್ತಿರುವ ರೈತರು ಬುಧವಾರ ಬೆಳಿಗ್ಗೆ ಸಂಸತ್ತಿನ ಸಂಕೀರ್ಣದಲ್ಲಿ ಕಾಂಗ್ರೆಸ್ ಸಂಸದ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾದರು.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರೂ ಆಗಿರುವ ರಾಹುಲ್ ಗಾಂಧಿ ಅವರು ಪಂಜಾಬ್, ಹರಿಯಾಣ, ಉತ್ತರ ಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಕರ್ನಾಟಕದ 12 ರೈತ ಮುಖಂಡರ ನಿಯೋಗವನ್ನು ಭೇಟಿ ಮಾಡಿದರು.

ಕಾಂಗ್ರೆಸ್‌ನ ಹಿರಿಯ ನಾಯಕರಾದ ಕೆಸಿ ವೇಣುಗೋಪಾಲ್ ಮತ್ತು ದೀಪೇಂದರ್ ಸಿಂಗ್ ಹೂಡಾ ಅವರು ಸಂಸದರಾದ ಅಮರಿಂದರ್ ಸಿಂಗ್ ರಾಜಾ ವಾರಿಂಗ್ ಮತ್ತು ಸುಖಜಿಂದರ್ ಸಿಂಗ್ ರಾಂಧವಾ ಅವರು ಸಭೆಯಲ್ಲಿ ಭಾಗವಹಿಸಿದ್ದರು.

ರೈತರನ್ನು ಒಳಗೆ ಬಿಡದ ಕಾರಣ ಸಭೆಗೂ ಮುನ್ನವೇ ಗೊಂದಲ ಉಂಟಾಯಿತು. "ನಾವು ಅವರನ್ನು ಆಹ್ವಾನಿಸಿದ್ದೇವೆ.. ಆದರೆ, ಅವರು ಸಂಸತ್ತಿನ ಒಳಗೆ ಅವರನ್ನು ಅನುಮತಿಸುತ್ತಿಲ್ಲ. ಬಹುಶಃ ಅವರು ರೈತರಾಗಿರುವ ಕಾರಣಕ್ಕೆ ಇರಬಹುದು.. ಇದಕ್ಕೆ ಕಾರಣವನ್ನು ನೀವು ಪ್ರಧಾನಿಯವರನ್ನು ಕೇಳಬೇಕಾಗುತ್ತದೆ.." ಎಂದು ರಾಹುಲ್ ಗಾಂಧಿ ಹೇಳಿದರು.



"ರಾಹುಲ್ ಗಾಂಧಿಯವರು ಸಂಸತ್ತಿನ ಒಳಗೆ ರೈತರ ಪರವಾಗಿ ಧ್ವನಿ ಎತ್ತುತ್ತಾರೆ " ಎಂದು ಸಭೆಯ ನಂತರ ವಾರಿಂಗ್ ತಿಳಿಸಿದರು. ರೈತರು ದೆಹಲಿಯಲ್ಲಿ ಮತ್ತೊಂದು ಮೆರವಣಿಗೆಯನ್ನು ಯೋಜಿಸುತ್ತಿದ್ದಾರೆ ಎಂಬ ವರದಿಗಳ ಮೇಲೆ, ಅವರು ದೆಹಲಿಗೆ ಬಂದು ಪ್ರತಿಭಟಿಸಲು ಎಲ್ಲ ಹಕ್ಕುಗಳನ್ನು ಹೊಂದಿದ್ದಾರೆ. ಖಾಸಗಿ ಸದಸ್ಯರ ಮಸೂದೆ ಅಗತ್ಯವಿದ್ದರೆ ನಾವು ಅದನ್ನು ಸಹ ತರುತ್ತೇವೆ ಎಂದರು.

ರೈತರಲ್ಲಿ ಒಬ್ಬರಾದ ಜಗಜಿತ್ ಸಿಂಗ್ ದಲ್ಲೆವಾಲ್ ಮಾತನಾಡಿ, "ಸರ್ಕಾರ ಇದುವರೆಗೆ ಭರವಸೆಗಳನ್ನು ಈಡೇರಿಸಲು ವಿಫಲವಾಗಿದೆ; ಸ್ವಾಮಿನಾಥನ್ ವರದಿ ಅನುಷ್ಠಾನ ಅತ್ಯಗತ್ಯ. ನಾವು ದೆಹಲಿ ಕಡೆಗೆ ಪಾದಯಾತ್ರೆಯನ್ನು ಮುಂದುವರಿಸುತ್ತೇವೆ.." ಎಂದು ಅವರು ತಿಳಿಸಿದರು.

ಇದಕ್ಕೂ ಮೊದಲು, ರೈತರು ತಮ್ಮ ರಾಜ್ಯಗಳಲ್ಲಿನ ಸಮಸ್ಯೆಗಳ ಬಗ್ಗೆ ರಾಹುಲ್ ಗಾಂಧಿಯವರೊಂದಿಗೆ ಮಾತನಾಡಿದರು. ದೀರ್ಘಾವಧಿಯ ಬೇಡಿಕೆಗಳನ್ನು ಈಡೇರಿಸಲು ಖಾಸಗಿ ಸದಸ್ಯರ ಮಸೂದೆಯನ್ನು ಪರಿಚಯಿಸಲು ಕೇಳಿಕೊಂಡರು. ಎಂಎಸ್‌ಪಿಯನ್ನು ಪರಿಷ್ಕರಿಸಲು ಮತ್ತು ಕಾನೂನು ಬೆಂಬಲವನ್ನು ಖಚಿತಪಡಿಸಿಕೊಳ್ಳುವ ಈ ಬೇಡಿಕೆಗಳು 2020 ರಲ್ಲಿ ಪ್ರಾರಂಭವಾದಾಗಿನಿಂದ ಅವರ ಪ್ರತಿಭಟನೆಯ ಮುಖ್ಯ ಭಾಗವಾಗಿದೆ.

ದೇಶದಾದ್ಯಂತದ ರೈತ ಸಂಘಗಳು ಎಂಎಸ್‌ಪಿಯನ್ನು ಬಯಸುತ್ತವೆ, ಸ್ವಾಮಿನಾಥನ್ ಆಯೋಗದ ಸಿ2+50 ಸೂತ್ರವನ್ನು ಆಧರಿಸಿರಬೇಕು, ಇದು ಬಂಡವಾಳದ ವೆಚ್ಚ ಮತ್ತು ಬೆಂಬಲ ಬೆಲೆಯನ್ನು ಲೆಕ್ಕಾಚಾರ ಮಾಡುವಾಗ ಭೂಮಿ ಬಾಡಿಗೆಯೂ ಸೇರಿರುತ್ತದೆ. ಆದರೆ, ಈಗಿರುವ ಎ2+ಎಫ್‌ಎಲ್+50 ಶೇಕಡಾ ವಿಧಾನವನ್ನು ಕೈಬಿಡಲು ಸರ್ಕಾರ ಹಿಂದೇಟು ಹಾಕುತ್ತಿದೆ.

ಸೂತ್ರವನ್ನು ಬದಲಾಯಿಸುವುದರ ಹೊರತಾಗಿ, ರೈತರು ಈ ಖರೀದಿ ಬೆಲೆಗೆ ಕಾನೂನು ಬೆಂಬಲವನ್ನು ಬಯಸುತ್ತಾರೆ; ಪ್ರಸ್ತುತ ಸರ್ಕಾರವು ಭತ್ತದ ಬೆಳೆಗೆ 10 ಪ್ರತಿಶತವನ್ನು ಮೂಲ ಬೆಲೆಗೆ ಖರೀದಿಸಲು ನಿರ್ಬಂಧವನ್ನು ಹೊಂದಿಲ್ಲ.

### ನೇಪಾಳ ವಿಮಾನ ನಿಲ್ದಾಣದಲ್ಲಿ ವಿಮಾನ ಪತನ

## 18 ಜನ ಪ್ರಯಾಣಿಕರು ದುರ್ಮರಣ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

19 ಜನರಿದ್ದ ವಿಮಾನವು ಕಠ್ಮಂಡು ವಿಮಾನ ನಿಲ್ದಾಣದಿಂದ ಟೇಕಾಫ್ ಆಗಲು ಯತ್ನಿಸುತ್ತಿದ್ದಾಗ ರನ್‌ವೇಯಿಂದ ಜಾರಿ ಬಿದ್ದು ಪತನಗೊಂಡಿತ್ತು. ವಿಮಾನವು ದೇಶೀಯ ಸೌರ್ಯ ಏರ್‌ಲೈನ್‌ಗೆ ಸೇರಿದ್ದು ಮತ್ತು ನೇಪಾಳಿ ರಾಜಧಾನಿಯಿಂದ ರೆಸಾರ್ಟ್ ಪಟ್ಟಣವಾದ ಪೊಖರಾಗೆ ತೆರಳುತ್ತಿತ್ತು ಎಂದು ತಿಳಿದುಬಂದಿದೆ.

ವಿಮಾನವು ಕೆಲವು ತಾಂತ್ರಿಕ ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿತ್ತು ಎಂದು ತ್ರಿಭುವನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ (ಟಿಐಎ) ಮಾಹಿತಿ ಅಧಿಕಾರಿ ಜ್ಞಾನೇಂದ್ರ ಭುಲ್ 'ಹಿಮಾಲಯನ್ ಟೈಮ್ಸ್'ಗೆ ತಿಳಿಸಿದ್ದಾರೆ. ವಿಮಾನದಿಂದ ಹೊಗೆ ಬರುತ್ತಿದ್ದು, ಅಗ್ನಿಶಾಮಕ ದಳ ಮತ್ತು ಭದ್ರತಾ ಸಿಬ್ಬಂದಿ ಪರಿಸ್ಥಿತಿ ನಿಯಂತ್ರಿಸಲು ಪ್ರಯತ್ನಿಸುತ್ತಿದ್ದಾರೆ.

ವರದಿಗಳ ಪ್ರಕಾರ, ವಿಮಾನದಲ್ಲಿದ್ದ 18 ಪ್ರಯಾಣಿಕರು ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ, ಪೈಲಟ್ ಬದುಕುಳಿಯುವಲ್ಲಿ ಯಶಸ್ವಿಯಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಅವರನ್ನು ಕಠ್ಮಂಡು ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಕ್ಯಾಪ್ಟನ್ ಎಂಆರ್ ಶಕ್ಯ ಎಂದು ಗುರುತಿಸಲಾದ ಪೈಲಟ್ ಅವರ ಕಣ್ಣಿಗೆ ಕೆಲವು ಗಾಯಗಳಾಗಿವೆ. ಆದರೆ, ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಪ್ರತ್ಯಕ್ಷದರ್ಶಿಗಳ ಪ್ರಕಾರ, ವಿಮಾನವು ರನ್‌ವೇಯ ದಕ್ಷಿಣ ತುದಿಯಿಂದ ಟೇಕ್ ಆಫ್ ಆಗುತ್ತಿದ್ದಾಗ ಅದು ಇದ್ದಕ್ಕಿದ್ದಂತೆ ರೆಕ್ಕೆಯ ತುದಿಯನ್ನು ನೆಲಕ್ಕೆ ಬಡಿದು ಪಲ್ಟಿಯಾಗಿದೆ. ವಿಮಾನವು ತಕ್ಷಣವೇ ಬೆಂಕಿ ಹೊತ್ತಿಕೊಂಡಿತು ಮತ್ತು ರನ್‌ವೇಯ ಪೂರ್ವ ಭಾಗದಲ್ಲಿರುವ ಕಮರಿಯಲ್ಲಿ ಮುಳುಗಿತು. ಕಠ್ಮಂಡುವಿನಲ್ಲಿ ಪ್ರಚಲಿತ ಮಾನ್ಸೂನ್ ಋತುವಿನ ಹೊರತಾಗಿಯೂ, ರಾಜಧಾನಿಯಲ್ಲಿ ಗೋಚರತೆ ಕಡಿಮೆ ಇದ್ದರೂ, ಅಪಘಾತದ ಸಮಯದಲ್ಲಿ ಮಳೆಯಾಗಿರಲಿಲ್ಲ. ವಿಮಾನವು ಸ್ಥಳೀಯ ಸೌರ್ಯ ಏರ್‌ಲೈನ್ಸ್‌ಗೆ ಸೇರಿದ್ದು, ಫ್ಲೈಟ್ ರಾಡಾರ್ 24 ರ ಪ್ರಕಾರ ಸುಮಾರು 20 ವರ್ಷ ಹಳೆಯದಾದ ಎರಡು ಬೊಂಬಾರ್ಡಿಯರ್ ಸಿಆರ್‌ಜೆ-200 ಪ್ರಾದೇಶಿಕ ಜೆಟ್‌ಗಳೊಂದಿಗೆ ನೇಪಾಳದಲ್ಲಿ ದೇಶೀಯ ವಿಮಾನಗಳನ್ನು ನಿರ್ವಹಿಸುತ್ತದೆ.

### ಭಯೋತ್ಪಾದಕರ ನಂಟು ಆರೋಪ

## ನಾಲ್ವರು ಸರ್ಕಾರಿ ಉದ್ಯೋಗಿಗಳನ್ನು ವಜಾಗೊಳಿಸಿದ ಜಮ್ಮು ಕಾಶ್ಮೀರ ಆಡಳಿತ

■ ವಿಜಯಸಾಕ್ಷಿ ಸುದ್ದಿ, ಜಮ್ಮು

ಜಮ್ಮು ಮತ್ತು ಕಾಶ್ಮೀರ ಆಡಳಿತವು ಭಯೋತ್ಪಾದಕ ಸಂಬಂಧ, ಕಾನೂನುಬಾಹಿರ ಮತ್ತು ದೇಶ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿರುವ ಆರೋಪದ ಮೇಲೆ ನಾಲ್ವರು ಸರ್ಕಾರಿ ನೌಕರರನ್ನು ಮಂಗಳವಾರ ಸೇವೆಯಿಂದ ವಜಾಗೊಳಿಸಿದೆ.

ವಜಾಗೊಂಡವರಲ್ಲಿ ಇಬ್ಬರು ಪೊಲೀಸ್ ಪೇದೆಗಳು, ಶಾಲಾ ಶಿಕ್ಷಣ ಇಲಾಖೆಗೆ ನಿಯೋಜಿಸಲಾದ ಕಿರಿಯ ಸಹಾಯಕ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಮಟ್ಟದ ಕಾರ್ಯಕರ್ತ ಸೇರಿದ್ದಾರೆ.

ವಜಾಗೊಂಡ ಪುಲ್ವಾಮಾ ಜಿಲ್ಲೆಯ ಕಾನ್ ಸ್ಟೇಬಲ್ ಇಮ್ತಿಯಾಝ್ ಅಹ್ಮದ್ ಲೋನ್ ಅವರು ಭಯೋತ್ಪಾದಕ ಕೃತ್ಯಗಳನ್ನು ಕಾರ್ಯಗತಗೊಳಿಸಲು ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ಸರಬರಾಜು, ಸಾಗಣೆ ಮತ್ತು ವಿತರಣೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇತರ ಮೂವರಲ್ಲಿ ಶಿಕ್ಷಣ ಇಲಾಖೆಯ ಉದ್ಯೋಗಿ ಬಾಜಿಲ್ ಅಹ್ಮದ್ ಮಿರ್ ಮತ್ತು ಕಾನ್‌ಸ್ಟೇಬಲ್ ಮುಷ್ತಾಕ್ ಅಹ್ಮದ್ ಪಿರ್ ಸೇರಿದ್ದು, ಇಬ್ಬರೂ ಕುಪ್ವಾರಾ ಜಿಲ್ಲೆಯವರು. ಪಂಚಾಯತ್ ರಾಜ್ ಇಲಾಖೆಯ ಮೊಹಮ್ಮದ್ ಝೈದ್ ಶಾ ಅವರು ಬಾರಾಮುಲ್ಲಾ ಜಿಲ್ಲೆಗೆ ಸೇರಿದವರು. ಮಾದಕವಸ್ತು ಕಳ್ಳಸಾಗಣೆ ಮತ್ತು ಪೂರೈಕೆಯಲ್ಲಿ ತೊಡಗಿಸಿಕೊಂಡಿದ್ದಾರೆ ಈ ಮೂಲಕ ಭಯೋತ್ಪಾದನಾ ಕೃತ್ಯಗಳಿಗೆ ಧನ ಸಹಾಯ ಮಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ವರದಿಗಳ ಪ್ರಕಾರ, ಬೀದಿ ಹಿಂಸಾಚಾರ ಪ್ರಚೋದಿಸುವಲ್ಲಿ ಪಾತ್ರ ವಹಿಸಿದ ಆರೋಪದ ಮೇಲೆ ಜೆ & ಕೆ ಬ್ಯಾಂಕ್ ಕೂಡ ಇತ್ತೀಚೆಗೆ ಹಿರಿಯ ಅಧಿಕಾರಿಯನ್ನು ವಜಾಗೊಳಿಸಿದೆ. ಆದರೆ ಇದನ್ನು ಬ್ಯಾಂಕ್ ಆಡಳಿತ ಇನ್ನೂ ದೃಢೀಕರಿಸಿಲ್ಲ.

### ಎಸ್.ಎಸ್.ಕೆ ಸಮಾಜದಿಂದ ಯಶಸ್ವಿ ನೇತ್ರ ತಪಾಸಣಾ ಶಿಬಿರ

# ಮಣ್ಣಾಗುವ ಮುನ್ನ ನೇತ್ರದಾನ ಮಾಡಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದಲ್ಲಿರುವ ಸಹಸ್ರಾರ್ಜುನ ಸಮುದಾಯ ಭವನದ ಲಕ್ಷ್ಮಣಸಾ ಸಭಾಗೃಹದಲ್ಲಿ ಎಸ್‌ಎಸ್‌ಕೆ ಸಮಾಜ ಮಹಿಳಾ ಮಂಡಳ, ಎಸ್.ಎಸ್.ಕೆ. ಸಮಾಜ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಜಿಮ್ಸ್ ಆಸ್ಪತ್ರೆ ಹಾಗೂ ಗದಗ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆಯ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ನಡೆಸಿ ಉಚಿತವಾಗಿ ಕನ್ನಡಕಗಳನ್ನು ವಿತರಿಸಲಾಯಿತು.

ಈ ಶಿಬಿರದಲ್ಲಿ 250ಕ್ಕೂ ಹೆಚ್ಚು ರೋಗಿಗಳಿಗೆ ನೇತ್ರ ತಪಾಸಣೆ ಮಾಡಲಾಯಿತು. 21 ಜನರಿಗೆ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಯಿತು. 102 ಜನರಿಗೆ ಕನ್ನಡಕ ವಿತರಿಸಲಾಯಿತು. ಇನ್ನುಳಿದವರಿಗೆ ಐಸಿಟಿಸಿ, ಎಚ್.ಬಿ.ಸಿ.ಜಿ., ಬಿ.ಪಿ ಹಾಗೂ ಸಕ್ಕರೆ ಖಾಯಿಲೆ ಸೇರಿದಂತೆ ಇತರೆ ಪರೀಕ್ಷೆಗಳನ್ನು ಮಾಡಲಾಯಿತು. ಶಿಬಿರದಲ್ಲಿ ಡಾ. ವರುಣ, ಡಾ. ಅಟಲ್, ನೇತ್ರ ಸಹಾಯಕ ಅಧಿಕಾರಿ ಮಂಜುನಾಥ ದೊಡ್ಡಮನಿ ಹಾಗೂ ಸಿಬ್ಬಂದಿಗಳೊಂದಿಗೆ ನೇತ್ರ ತಪಾಸಣೆ ಮಾಡಿದರು.



ಈ ಸಂದರ್ಭದಲ್ಲಿ ಎಸ್‌ಎಸ್‌ಕೆ ಸಮಾಜದ ಪಂಚ ಟ್ರಸ್ಟ್ ಕಮಿಟಿ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಮಾತನಾಡಿ, ಮಣ್ಣಿನಲ್ಲಿ ಮಣ್ಣಾಗುವ ಮುನ್ನ ನೇತ್ರಗಳನ್ನು ದಾನ ಮಾಡಿ ಇನ್ನೊಬ್ಬರ ಬಾಳಿನಲ್ಲಿ ಬೆಳಕಾಗಬೇಕು. ಅದೇ ರೀತಿ ರಕ್ತದಾನ ಮಾಡಿ ದೇವರು ನೀಡಿದ ಜನ್ಮವನ್ನು ಮಾಡಿ ಇನ್ನೊಬ್ಬರಿಗೆ ಜೀವದಾನ ಸಾರ್ಥಕಪಡಿಸಿಕೊಳ್ಳಬೇಕೆಂದು ಹೇಳಿದರು.

> ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್‌ಎಸ್‌ಕೆ. ಸಮಾಜದ ಮಹಿಳಾ ಮಂಡಳದ ಅಧ್ಯಕ್ಷೆ ಉಮಾ ಬೇವಿನಕಟ್ಟಿ ಮಾತನಾಡಿ, ಕಣ್ಣುಗಳಿಲ್ಲದೆ ಈ ಜಗತ್ತನ್ನು ನೋಡಲು ಸಾಧ್ಯವಿಲ್ಲ. ಅಂತಹ ಜಗತ್ತನ್ನು ನೋಡಲು ನಾವು ಇನ್ನೊಬ್ಬರಿಗೆ ಕಣ್ಣಾಗಬೇಕು ಮತ್ತು ಜಗತ್ತಿನಲ್ಲಿ ಕೃತಕವಾಗಿ ರಕ್ತವನ್ನು ತಯಾರು ಮಾಡಲು ಸಾಧ್ಯವಿಲ್ಲ. ಆದ್ದರಿಂದ ನಾವು ಆರೋಗ್ಯವಂತರಾಗಲು ಮತ್ತು ಇನ್ನೊಬ್ಬರಿಗೆ ಜೀವದಾನ ಮಾಡಲು ರಕ್ತದಾನ ಮಾಡಬೇಕು ಎಂದು ಹೇಳಿದರು.

ಮಹಿಳಾ ಮಂಡಳದ ಉಪಾಧ್ಯಕ್ಷೆ ಸ್ನೇಹಲತಾ ಕಬಾಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಎಸ್‌ಎಸ್‌ಕೆ ಸಮಾಜವು ಹೆಚ್ಚು ಸಂಘಟಿತರಾಗಿ ಇಂತಹ ಸಮಾಜಸೇವೆಗಳನ್ನು ಮಾಡಲು ಮುಂದೆ ಬರಬೇಕು ಎಂದರು.

ಈ ಸಂದರ್ಭದಲ್ಲಿ ಪಂಚ ಟ್ರಸ್ಟ್ ಕಮಿಟಿ ಸದಸ್ಯರಾದ ಪರಶುರಾಮಸಾ ಬದಿ, ನಾಗೇಶ ಖೋಡೆ, ರೇಖಾ ಬೇವಿನಕಟ್ಟಿ, ಗೀತಾ ಹಬೀಬ, ಕಸ್ತೂರಿಬಾಯಿ ಬಾಂಡಗೆ, ಸುನಂದಾ ಹಬೀಬ, ಲಲಿತಾಬಾಯಿ ಬಾಕಳೆ, ಸರೋಜಾಬಾಯಿ ಟಿಕಣದಾರ, ರೇಣುಕಾಬಾಯಿ ಕಲಬುರ್ಗಿ, ರತ್ನಾಬಾಯಿ ಹಬೀಬ, ವಂದನಾ ಶಿದ್ಲಿಂಗ, ಶಾಂತಾಬಾಯಿ ಬಾಕಳೆ, ಹೇಮಾ ಬೇವಿನಕಟ್ಟಿ ಮುಂತಾದವರು ಉಪಸ್ಥಿತರಿದ್ದರು. ಸುಶೀಲಾಬಾಯಿ ಶಿದ್ಲಿಂಗ, ಪ್ರಾರ್ಥಿಸಿದರು. ನಾಗೇಶ ಖೋಡೆ ಸ್ವಾಗತಿಸಿದರು. ಶ್ರೀಕಾಂತ ಬಾಕಳೆ ನಿರೂಪಿಸಿದರು. ಆರ್.ಟಿ. ಕಬಾಡಿ ವಂದಿಸಿದರು.

## ಹೊರೆ ಹೆಚ್ಚಿಸುವ ಬಜೆಟ್

■ **ವಿಜಯಸಾಕ್ಷಿ ಸುದ್ದಿ, ಗದಗ**



ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್.ಡಿ.ಎ ಸರಕಾರದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಗಳವಾರ ಮಂಡಿಸಿರುವ ಬಜೆಟ್ ಬೆಲೆ ಏರಿಕೆ ಮುಂಗಡ ಪತ್ರದಂತಿದೆ. ಈ ಬಜೆಟ್‌ನಿಂದಾಗಿಯೇ ಪ್ಲಾಸ್ಟಿಕ್, ವಿದ್ಯುತ್ ಉಪಕರಣಗಳು, ಬಟ್ಟೆ ಸೇರಿದಂತೆ ಹಲವು ವಸ್ತುಗಳ ಬೆಲೆ ಏರಿಕೆ ಆಗಿದೆ. ಇದು ಜನಸಾಮಾನ್ಯರ ಹೊರೆ ಹೆಚ್ಚಿಸುವ ಬಜೆಟ್ ಆಗಿದೆ.

ಇದು ದೇಶದ ಮತ್ತು ರಾಜ್ಯದ ಜನರ ನಿರೀಕ್ಷೆಗಳನ್ನು ಹುಸಿ ಮಾಡಿರುವ ಮುಂಗಡಪತ್ರವಾಗಿದೆ ಎಂದು ಕಾಂಗ್ರೆಸ್ ಯುವನಾಯಕ ಕರೀಮಸಾಬ ಸುಣಗಾರ ಟೀಕಿಸಿದ್ದಾರೆ.

## ಮಾರಣಾಂತಿಕ ಡೆಂಘೀ ಬಗ್ಗೆ ಎಚ್ಚರಿಕೆಯಿರಲಿ



■ **ವಿಜಯಸಾಕ್ಷಿ ಸುದ್ದಿ, ನರೇಗಲ್**

ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಮೂಲಕ ಡೆಂಘೀ ಜ್ವರವನ್ನು ನಿಯಂತ್ರಣಕ್ಕೆ ತರಬಹುದು ಎಂದು ಡಾ. ಎಸ್.ಎ. ಬಿರಾದಾರ ಹೇಳಿದರು.

ಸಮೀಪದ ಅಬ್ಬಿಗೇರಿ ಬಾಲಕರ ಸರ್ಕಾರಿ ಮಾದರಿ ಕೇಂದ್ರ ಶಾಲೆಯಲ್ಲಿ ರೋಣ ಆರ್.ಬಿ.ಎಸ್.ಕೆ ಇವರ ಆಶ್ರಯದಲ್ಲಿ ನಡೆದ ಡೆಂಘೀ ಜ್ವರದ ಹರಡುವಿಕೆ ಮತ್ತು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಕುರಿತು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು.

ಡೆಂಘೀ ಜ್ವರವನ್ನು ತಡೆಗಟ್ಟಲು ಲಸಿಕೆ ಲಭ್ಯವಿರುವುದಿಲ್ಲ. ಆದ್ದರಿಂದ ರೋಗ ಲಕ್ಷಣಗಳಿಗೆ ಅನುಗುಣವಾದ ಚಿಕಿತ್ಸೆಯಿಂದ ಗುಣಪಡಿಸಬಹುದು. ಸೂಕ್ತ ಸಮಯಕ್ಕೆ ಚಿಕಿತ್ಸೆ ಪಡೆಯದಿದ್ದಲ್ಲಿ, ಸಾವು ಸಂಭವಿಸುವ ಸಾಧ್ಯತೆ ಇರುತ್ತದೆ. ಡೆಂಗ್ಯೂ ಜ್ವರದ ತಪಾಸಣೆ, ರಕ್ತ ಪರೀಕ್ಷೆ ಹಾಗೂ ಚಿಕಿತ್ಸೆಯನ್ನು ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಸೇವೆಯ ಸೌಲಭ್ಯ ನೀಡಲಾಗುತ್ತಿದೆ ಎಂದರು.

ಡಾ. ಎಸ್.ಪಿ. ಸಾರಾಂಗಮಠ ಮಾತನಾಡಿ, ಡೆಂಘೀ ಜ್ವರ ಸಾಂಕ್ರಾಮಿಕ ರೋಗವಾಗಿದ್ದು, ಈ ರೋಗವನ್ನು ತಡೆಗಟ್ಟಲು ನಮ್ಮ ಪರಿಸರದ ಸ್ವಚ್ಛತೆ ಕಾಪಾಡುವುದರೊಂದಿಗೆ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಡೆಂಘೀ ನಿಯಂತ್ರಣದಲ್ಲಿ ಸಮುದಾಯದ ಸಕ್ರಿಯ ಭಾಗವಹಿಸುವಿಕೆ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಗತ್ಯ ಸಹಕಾರವನ್ನು ಪಡೆಯುವುದು, ಯಾವುದೇ ಜ್ವರವಿದ್ದರೂ ನಿರ್ಲಕ್ಷಮಾಡದೇ, ತಕ್ಷಣ ಸರ್ಕಾರಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಪಡೆಯುವುದರಿಂದ ಡೆಂಘೀ ಜ್ವರದಿಂದ ಉಂಟಾಗುವ ಸಾವು ನೋವುಗಳನ್ನು ತಡೆಗಟ್ಟಬಹುದು ಎಂದರು.

ವೈದ್ಯ ಸಿಬ್ಬಂದಿ ನಾಗರಾಜ, ಪ್ರವೀಣ ಮಕ್ಕಳ ತಪಾಸಣೆ ನಡೆಸಿದರು. ಶಾಲೆಯ ಎಲ್ಲ ಶಿಕ್ಷಕ-ಶಿಕ್ಷಕೇತರ ವೃಂದದವರು ಹಾಗೂ ಮಕ್ಕಳು ಇದ್ದರು. ಶಿಕ್ಷಕರಾದ ಆರ್.ವಿ. ಬೆಲ್ಲದ ಕಾರ್ಯಕ್ರಮ ನಿರೂಪಿಸಿದರು, ಆರ್.ಡಿ. ರಂಗಣ್ಣವರ ವಂದಿಸಿದರು.



ಬೆಟಗೇರಿ ಪೊಲೀಸ್ ಠಾಣೆಯ ಪಿಎಸ್‌ಐಯಾಗಿ ಅಧಿಕಾರ ವಹಿಸಿಕೊಂಡಿರುವ ಲಕ್ಷ್ಮಣ ಆರಿ ಅವರನ್ನು ಸಾಮಾಜಿಕ ಕಾರ್ಯಕರ್ತರು, ದಲಿತ ಮುಖಂಡರಾದ ಸತೀಶ್ ಹೂಲಿ, ಆರ್ ಎಲ್ ಮೇಳೆನವರ, ಮಹಾದೇವ ಚಲವಾದಿ ಸ್ವಾಗತಿಸಿ, ಅಭಿನಂದಿಸಿದರು




ನಗರಸಭೆ ಮಾಜಿ ಅಧ್ಯಕ್ಷರಾದ ಶ್ರೀಮತಿ ನಾಗರತ್ನಾ ಶಿವಣ್ಣ ಮುಳಗುಂದ ಅವರ 60ನೇ ವರ್ಷದ ಜನ್ಮದಿನವನ್ನು ಶಿವರತ್ನ ಪ್ಯಾಲೇಸ್‌ನಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬೆಟಗೇರಿಯ ಉದ್ಯಮಿಗಳಾದ ನಗರಸಭೆ ಮಾಜಿ ಅದ್ಯಕ್ಷ ಶಿವಣ್ಣ ಜೀ ಮುಳಗುಂದ, ವಿಜಯಕುಮಾರ್ ಕಬಾಡಿ, ಅನಿಲ ಗಡ್ಡಿ, ಅಂಬರೀಶ್ ಜ್ಯಾಗಿ, ಯಲ್ಲಪ್ಪ ಮಿಸ್ಕಿನ ಹಾಗೂ ಅಣ್ಣಾ ಸಾವಜಿ ಹೊಟೇಲ್ ಮಾಲೀಕರಾದ ಕೃಷ್ಣ ನಾ ರಾಯಬಾಗಿ ಸೇರಿದಂತೆ ಹಿರಿಯರು ಉಪಸ್ಥಿತರಿದ್ದರು.

## ಹಡಪದ ಸಮಾಜದ ಅಭಿವೃದ್ಧಿಗೆ ಶ್ರಮಿಸಿ

■ **ವಿಜಯಸಾಕ್ಷಿ ಸುದ್ದಿ, ನರೇಗಲ್**

ಜಗಜ್ಯೋತಿ ಬಸವಣ್ಣನವರ ಸಮಕಾಲೀನರಾದ ಶಿವಶರಣ ಹಡಪದ ಅಪ್ಪಣ್ಣನವರ ತತ್ವಾದರ್ಶ ಇಂದಿಗೂ ಅನನ್ಯವಾಗಿವೆ. ಅವುಗಳನ್ನು ಪ್ರತಿಯೊಬ್ಬರೂ ನಿತ್ಯ ಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಹಸನಾಗುತ್ತದೆ ಎಂದು ಪ.ಪಂ ಮುಖ್ಯಾಧಿಕಾರಿ ರಮೇಶ ಹೊಸಮನಿ ಹೇಳಿದರು.



ಸ್ಥಳೀಯ ಪಟ್ಟಣ ಪಂಚಾಯತಿ ಕಾರ್ಯಾಲಯದಲ್ಲಿ ಹಡಪದ ಅಪ್ಪಣ್ಣ ಜಯಂತಿ ಅಂಗವಾಗಿ ಅಪ್ಪಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಶರಣ ಹಡಪದ ಅಪ್ಪಣ್ಣನವರು ಜಾತಿ, ಧರ್ಮ ಹಾಗೂ ವರ್ಗರಹಿತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ್ದಾರೆ. ಅವರು 12ನೇ ಶತಮಾನದ ವಚನ ಚಳುವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಒಬ್ಬರಾಗಿದ್ದರು. ವಚನಗಳ ಮೂಲಕ ಸಮಾಜದ ಎಲ್ಲಾ ವರ್ಗಗಳ ಮೇಲೆ ಬೆಳಕು ಚೆಲ್ಲಿದ ಮಹನೀಯರು. ಹಡಪದ ಸಮಾಜವು ಸಣ್ಣ ಸಮಾಜವಾಗಿದ್ದು, ಇದರ ಬೆಳವಣಿಗೆಗೆ ಎಲ್ಲರೂ ಸಮರ್ಪಣಾ ಭಾವನೆಯಿಂದ ಮತ್ತು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಕುಮಾರಸ್ವಾಮಿ ಕೋರಧಾನ್ಯಮಠ, ಎಸ್.ಕೆ. ದೊಡ್ಡಣ್ಣವರ, ಅಡಿವೆಪ್ಪ ಮೇಣಸಗಿ, ವಿ.ಐ. ಮಡಿವಾಳರ, ಉದಯ ಮುದೇನಗುಡಿ, ಮಹಾದೇವ ಮ್ಯಾಗೇರಿ, ಸಕ್ರಪ್ಪ ಹಡಪದ, ಬಸವರಾಜ ಹಡಪದ, ಶೇಖಪ್ಪ ಕ್ಯಾಡದ್, ಕಳಕಪ್ಪ ಹಡಪದ, ಆನಂದ ಹಡಪದ, ಶರಣಪ್ಪ ಹಡಪದ ಬಸವರಾಜ ಕ್ಯಾಡದ್, ವೀರಪ್ಪ ಹಡಪದ, ಚಂದ್ರು ಹಡಪದ, ಮಲ್ಲಿಕಾರ್ಜುನ ಹಡಪದ, ಸಂಜೀವಕುಮಾರ ಗುಡಿಮನಿ ಮುಂತಾದವರಿದ್ದರು.

## ತಾಯಿಯೇ ಮೊದಲ ಗುರು



■ **ವಿಜಯಸಾಕ್ಷಿ ಸುದ್ದಿ, ನರೇಗಲ್**

ಜಗತ್ತಿನಲ್ಲಿರುವ ಪ್ರತೀ ವ್ಯಕ್ತಿಗೂ ತಾಯಿಯೇ ಮೊದಲ ಗುರುವಾಗಿದ್ದಾಳೆ. ಆದ್ದರಿಂದ ಮೊದಲ ಪೂಜೆ ತಾಯಿಗೆ ಸಲ್ಲಬೇಕು. ಗುರುಪೂರ್ಣಿಮೆಯ ಈ ದಿನದಂದು ನಾವು ತಾಯಂದಿರನ್ನು ನೆನೆಸಿಕೊಂಡು ನಂತರ ಕಲಿಸಿದ ಗುರುವಿಗೆ ನಮ್ಮ ನಮನಗಳನ್ನು ಸಲ್ಲಿಸಬೇಕೆಂದು ಡಾ. ಕೆ.ಬಿ. ಧನ್ನೂರ ಹೇಳಿದರು.

ಪಟ್ಟಣದ ಶ್ರೀ ಮಂಜುನಾಥ ಪ್ರಾಥಮಿಕ (ಅಪ್ಪಣ್ಣವರ) ಶಾಲೆಯಲ್ಲಿ ನಡೆದ ಗುರುಪೂರ್ಣಿಮೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗೆ ಮುಂದೆ ಗುರಿ, ಹಿಂದೆ ಗುರು ಇದ್ದರೆ ಯಶಸ್ಸು ಸಾಧ್ಯ. ಅದಕ್ಕಾಗಿ ಎಲ್ಲ ವಿದ್ಯಾರ್ಥಿಗಳು ಛಲ ಬಿಡದೆ ಸತತ ಪ್ರಯತ್ನದಿಂದ ಅಭ್ಯಾಸ ಮಾಡಬೇಕು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಗುರಿ ಏನೆಂಬುದನ್ನು ಇಟ್ಟುಕೊಂಡು ಮುನ್ನಡೆಯಬೇಕು. ಯಾವ ಗುರಿ ಇಟ್ಟುಕೊಂಡಿದ್ದೇವೆ ಎಂಬುದರ ಕುರಿತು ಕನಸನ್ನು ಕಾಣುತ್ತಿದ್ದರೆ ಅದು ನನಸಾಗುವದರಲ್ಲಿ ಸಂಶಯವಿಲ್ಲ ಎಂದರು.

ಸಂಸ್ಥೆಯ ಅಧ್ಯಕ್ಷೆ ನೇತ್ರಾ ಅಪ್ಪಣ್ಣವರ ಮಾತನಾಡಿ, ನಿಜವಾದ ಶಿಕ್ಷಕ ಜ್ಞಾನವನ್ನು ಸಂಗ್ರಹಿಸಿ ಅದನ್ನು ಮಕ್ಕಳ ಹೃದಯದಲ್ಲಿ ತುಂಬುವ ಮಹಾನ್ ಸಾಧಕ. ಅಂತಹ ನಿಜವಾದ ಗುರುಗಳನ್ನು ಹಾಗೂ ಜ್ಞಾನವನ್ನು ಪಡೆದ ನೀವು ಧನ್ಯರು. ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿ ಸಾಧನೆ ಮಾಡಿ ಅವರ ಸಾಧನೆಗೆ ಬೆನ್ನೆಲುಬಾದ ಶಿಕ್ಷಕರನ್ನು ನೆನೆಯುವ ಕ್ಷಣ ಅವಿಸ್ಮರಣೀಯ ಎಂದರು.

ಈ ಸಂದರ್ಭದಲ್ಲಿ ಪಾಲಕರಾದ ಸಂಗನಗೌಡ ಚನ್ನಪ್ಪಗೌಡ್ರ, ರೇವಣೆಪ್ಪ ಯಲಬುರ್ಗಿ, ರಘುನಾಥ ಕೊಂಡಿ, ಹಟೇಸ್‌ಸಾಬ್ ಲತೀಫ್‌ಸಾಬನವರ, ಶಿಕ್ಷಕರಾದ ಸುಜಾತಾ ಚಿಂಚಲಿ, ಶಹಜಾನ್‌ಬೇಗಂ ದರಗಾದ, ಸ್ನೇಹಲತಾ ಸಾಲಿಮಠ, ಸೀಮಾ ಕೊಂಡಿ ಮುಂತಾದವರಿದ್ದರು.

### ಶಾರದಾ ಸಂಗೀತ ಗುರುಕುಲದಿಂದ ಏರ್ಪಡಿಸಿದ್ದ ಸಂಗೀತ ಕಾರ್ಯಕ್ರಮದಲ್ಲಿ ಉಸ್ತಾದ್ ಶಫೀಕ್ ಖಾನ್

## ಸಂಗೀತ ವಿದ್ಯೆಯ ಕಲಿಕೆ ತಪಸ್ಸಿನಂತೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶಾರದಾ ಸಂಗೀತ ಗುರುಕುಲದಿಂದ ಎಪಿಎಂಸಿ ಸಭಾ ಭವನದಲ್ಲಿ ಆಯೋಜಿಸಲಾಗಿದ್ದ ಸಂಗೀತ ಕಾರ್ಯಕ್ರಮದಲ್ಲಿ ಖ್ಯಾತ ಸಿತಾರ್ ವಾದಕ ಉಸ್ತಾದ್ ಶಫೀಕ್ ಖಾನ್ ಸಂಗೀತದ ರಸದೌತಣ ನೀಡಿದರು. ಈ ವೇಳೆ ಅವರಿಗೆ ಗುರುಕುಲ ಸಂಸ್ಥೆಯ ವತಿಯಿಂದ 'ಸಂಗೀತ ವಿಭೂಷಣ' ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.




ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, ನಾಡಿನ ಹಲವು ದಾರ್ಶನಿಕರು ಸಮಾಜದ ಒಳಿತಿಗಾಗಿ ಸಾಹಿತ್ಯ, ಸಂಗೀತದ ಮೂಲಕ ಶ್ರೇಷ್ಠ ಚಿಂತನೆಗಳನ್ನು ಸಾರಿದ್ದಾರೆ. ಸಂಗೀತ ಕಲಿಯುವದೊಂದು ತಪಸ್ಸಿದ್ದಂತೆ. ಪ್ರಾಮಾಣಿಕತೆ, ಶ್ರದ್ಧೆ, ನಿಷ್ಠೆ, ಸತತ ಅಭ್ಯಾಸದ ಮೂಲಕ ಸಂಗೀತವನ್ನು ಕಲಿಯುವವರಿಗೆ ಸಂಗೀತ ಸರಸ್ವತಿ ಒಲಿಯುತ್ತಾಳೆ. ಸಂಗೀತ ಪರಂಪರೆಯ ಪುಲಿಗೆರೆ ಕ್ಷೇತ್ರದಲ್ಲಿ ನನಗೆ ಪ್ರಶಸ್ತಿ ನೀಡಿ ಗೌರವಿಸಿರುವದು ನನ್ನ ಪುಣ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಗಜೇಂದ್ರಗಡದ ಸತ್ಯನಾರಾಯಣ ತೈಲಂಗ ಅವರು ಉದ್ಘಾಟಿಸಿ ಮಾತನಾಡಿ, ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಸಂಗೀತಾಸಕ್ತಿ ಮೂಡಿಸಿದರೆ ಸಂಸ್ಕಾರ, ಮೌಲ್ಯಗಳನ್ನು ರೂಢಿಸಬಹುದು. ಅಶ್ಲೀಲ ಸಾಹಿತ್ಯದ ಇತ್ತೀಚಿನ ಹಾಡುಗಳು ಮತ್ತು ಪಾಶ್ಚಿಮಾತ್ಯ ಸಂಗೀತಗಳಿಗೆ ಮಾರುಹೋಗಿರುವ ಯುವ ಜನತೆಗೆ ನಮ್ಮ ಶ್ರೇಷ್ಠವಾದ ಸಂಗೀತ ಪರಂಪರೆ, ಸಂಸ್ಕೃತಿಯನ್ನು ತಿಳಿಸುವ ಕಾರ್ಯವಾಗಬೇಕು ಎಂದರು.

ಪತ್ರಕರ್ತರಾದ ನಾಗರಾಜ ಹಣಗಿ, ದಿಗಂಬರ ಪೂಜಾರ ಮಾತನಾಡಿದರು. ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷೆ ಶಾರದಾ ಕುಲಕರ್ಣಿ ವಹಿಸಿದ್ದರು.

> ನಂತರ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಗುರುಕುಲದ ಪುಟ್ಟ ವಿದ್ಯಾರ್ಥಿಗಳು ಸಂಗೀತ ಸೇವೆ, ತಬಲಾ ಸೋಲೋ ಪ್ರದರ್ಶನ ನೀಡಿ ಗಮನ ಸೆಳೆದರು. ದಿ. ಗಂಗೂಬಾಯಿ ಹಾನಗಲ್ ಅವರ ಶಿಷ್ಯ ಕುಂದಗೋಳದ ಪಂ. ಅಶೋಕ ನಾಡಗೀರ, ಖ್ಯಾತ ಸಿತಾರ್ ವಾದಕ ಶಫೀಕ್‌ಖಾನ್ ಅವರಿಂದ ಸಿತಾರ ವಾದನ, ಪಟ್ಟಣದ ಯುವ ಕಲಾವಿದ ಪರಶುರಾಮ ಭಜಂತ್ರಿ ಅವರ ಗಾಯನ ಮನಸೂರೆಗೊಂಡಿತು. ಇವರಿಗೆ ಕೃಷ್ಣಕುಮಾರ ಕುಲಕರ್ಣಿ, ಭೀಮಾಶಂಕರ ಬಿದನೂರ ಅವರು ತಬಲಾ ಮತ್ತು ಪ್ರಕಾಶ ಹೆಗಡೆ ಹಾರ್ಮೋನಿಯಂ ಸಾಥ್ ನೀಡಿದರು.

ಅತಿಥಿಗಳಾಗಿ ಗದಗ ಕೆವಿಜಿ ಬ್ಯಾಂಕ್ ವ್ಯವಸ್ಥಾಪಕ ಶ್ರೀಪಾದರಾಜ ಹೊಂಬಳ, ಸಂಗೀತ ಶಿಕ್ಷಕಿ ಶೈಲಜಾ ರಾಯಬಾಗಿ, ಕೊಪ್ಪಳದ ಪಾವಣಸ್ಕರ್ ಮ್ಯೂಸಿಕ್ ಫೌಂಡೇಶನ್ ಸಂಸ್ಥಾಪಕ ಅನಂತ ಪಾವಣಸ್ಕರ ಉಪಸ್ಥಿತರಿದ್ದರು. ಸಂಸ್ಥೆಯ ಪ್ರಾಚಾರ್ಯೆ ಗಾಯತ್ರಿ ಕುಲಕರ್ಣಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕೃಷ್ಣಕುಮಾರ ಕುಲಕರ್ಣಿ, ವಿನಾಯಕ ವೇತಾಳ ನಿರೂಪಿಸಿದರು.

## ಬಾಲ್ಯವಿವಾಹ ಕಾನೂನು ಬಾಹಿರ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜದಲ್ಲಿ ಬಾಲ್ಯವಿವಾಹ ತಡೆಗಟ್ಟಲು ಜನರಲ್ಲಿ ಅರಿವು ಮೂಡಿಸುವದು ಅವಶ್ಯವಾಗಿದ್ದು, ಸಮಾಜದ ಪ್ರತಿಯೊಬ್ಬರೂ ಬಾಲ್ಯವಿವಾಹ ಕಾನೂನಿಗೆ ವಿರುದ್ಧವಾಗಿದೆ ಎನ್ನುವದನ್ನು ಅರಿತುಕೊಳ್ಳಬೇಕಾಗಿದೆ ಎಂದು ಶಿಗ್ಲಿಯ ಅಂಗನವಾಡಿ ಕಾರ್ಯಕರ್ತೆ ಸಾವಿತ್ರಿ ಮೊಸಬಿನಹಾಳ ಹೇಳಿದರು.

ಅವರು ಸಮೀಪದ ಶಿಗ್ಲಿ ಗ್ರಾಮ ಕೆ.ಜಿ. ಮುದಗಲ್ ಪ್ರೌಢಶಾಲೆಯಲ್ಲಿ 'ಮಕ್ಕಳ ಹಕ್ಕುಗಳ ರಕ್ಷಣೆ ಅವಶ್ಯ' ಎನ್ನುವ ಒಂದು ದಿನದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದರು.

21 ವರ್ಷದ ಹುಡುಗ ಮತ್ತು 18 ವರ್ಷದ ಒಳಗಿನ ಹುಡುಗಿ ಮದುವೆ ಆದರೆ ಅದು ಬಾಲ್ಯವಿವಾಹ ಕಾಯ್ದೆ ಅಡಿ ಅಪರಾಧ. ಈ ಅಪರಾಧಿಗಳಿಗೆ ಕಾನೂನಿನಲ್ಲಿ ದಂಡ, ಮತ್ತು ಶಿಕ್ಷೆ ಕೂಡಾ ಇರುತ್ತದೆ. ಬಾಲ್ಯ ವಿವಾಹವನ್ನು ತಡೆಗಟ್ಟುವಲ್ಲಿ ಸಮಾಜದ ಪ್ರತಿಯೊಬ್ಬರ ಪಾತ್ರ ಮುಖ್ಯವಾಗಿದೆ ಎಂದು ಹೇಳಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಯ ಎಲ್.ಎಸ್. ಅರಳಹಳ್ಳಿ ಮಾತನಾಡಿ, ಭಾರತದಲ್ಲಿ ಬಾಲ್ಯವಿವಾಹದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವಲ್ಲಿ ಮಾಧ್ಯಮಗಳು ಹಿರಿದಾದ ಪಾತ್ರ ವಹಿಸಬೇಕು. ಭಾರತದಲ್ಲಿ ಬಾಲ್ಯವಿವಾಹ ಅಭ್ಯಾಸವನ್ನು ಕುಂಠಿತಗೊಳಿಸಿ ಸರ್ಕಾರಿ ಸಂಸ್ಥೆಗಳು ಮತ್ತು ಎನ್‌ಜಿಓಗಳು ಒಟ್ಟುಗೂಡಿ ಕೆಲಸ ಮಾಡಬೇಕಿದೆ. 2030ರ ವೇಳೆಗೆ ವಿಶ್ವದಲ್ಲಿ ಬಾಲ್ಯವಿವಾಹ ನಿರ್ಮೂಲನೆ ಮಾಡುವ ಮೂಲಕ ದೇಶದ ಅಭಿವೃದ್ಧಿಗೆ ಶ್ರಮಿಸೋಣ ಎಂದ ಅವರು, ಈ ಬಾಲ್ಯವಿವಾಹಕ್ಕೆ ಅನೇಕ ಕಾರಣಗಳಿವೆ. ಕಡುಬಡತನ, ಶಿಕ್ಷಣದ ಕೊರತೆ ಮುಂತಾದ ಕಾರಣಗಳಿಂದ ಈ ಅಪರಾಧಿಗಳು ಹೆಚ್ಚುತ್ತಿದೆ ಎಂದರು.

ಈ ಸಂದರ್ಭದಲ್ಲಿ ವ್ಹಿ.ಸಿ. ಬೆಂಡಿಗೇರಿ, ಎಂ.ಬಿ. ಕಲ್ಲೂರ, ಟಿ.ಎಸ್. ಹೂಗಾರ, ಮಾಲಾ ಹೆಬ್ಬಳ್ಳಿ, ಎಂ.ವ್ಹಿ. ತಿಮ್ಮಾಪೂರ ಮುಂತಾದವರು ಉಪಸ್ಥಿತರಿದ್ದರು.




## ನಿಧನ ವಾರ್ತೆ

**ಉಮೇಶ ಬೆಳವಗಿ**



ಲಕ್ಷ್ಮೇಶ್ವರ: ಪಟ್ಟಣದ ಬಸ್ತಿಬಣದ ನಿವಾಸಿ ಉಮೇಶ ಮಾನಪ್ಪ ಬೆಳವಗಿ (66) ಮಂಗಳವಾರ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವಿದೆ. ತಾಲೂಕಿನಲ್ಲಿ ಬಿಜೆಪಿ ಪಕ್ಷ ಕಟ್ಟಿ ಬೆಳೆಸುವಲ್ಲಿ ಶ್ರಮಿಸಿದ ಇವರ ನಿಧನಕ್ಕೆ ಬಿಜೆಪಿ ನಾಯಕರು, ಕಾರ್ಯಕರ್ತರು ಸಂತಾಪ ಸೂಚಿಸಿದ್ದಾರೆ.

## ಲಯನ್ಸ್ ಕ್ಲಬ್ ಪದಾಧಿಕಾರಿಗಳ ಆಯ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ 2024-25ನೇ ಸಾಲಿನ ನೂತನ ಅಧ್ಯಕ್ಷರಾಗಿ ನಿತೀಶ್ ವೈ.ಸಾಲಿ, ಉಪಾಧ್ಯಕ್ಷರಾಗಿ ಡಾ. ನವೀನ ಹಿರೇಗೌಡ್ರ, ಡಾ. ತುಕಾರಾಮ ಸೂರಿ, ನಿಕಟಪೂರ್ವ ಅಧ್ಯಕ್ಷರಾಗಿ ರಮೇಶ ಶಿಗ್ಲಿ, ಕಾರ್ಯದರ್ಶಿಯಾಗಿ ಡಾ. ರಾಜಶೇಖರ ಪಾಟೀಲ, ಸಹ ಕಾರ್ಯದರ್ಶಿಯಾಗಿ ವಿಜಯ ಹುಬಳೀಮಠ, ಖಜಾಂಚಿಯಾಗಿ ಲಿಂಗರಾಜ ತೋಟದ, ಸಹ ಖಜಾಂಚಿಯಾಗಿ ರೇಣುಕ ಪ್ರಸಾದ ಹಿರೇಮಠ ಆಯ್ಕೆಯಾಗಿದ್ದಾರೆ.



ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಮಹಿಳಾ ಘಟಕದ ಅಧ್ಯಕ್ಷೆಯಾಗಿ ಅನುರಾಧಾ ನಿತೀಶ್ ಸಾಲಿ, ಕಾರ್ಯದರ್ಶಿಯಾಗಿ ಡಾ. ರಶ್ಮಿ ರಾಜಶೇಖರ ಪಾಟೀಲ, ಖಜಾಂಚಿಯಾಗಿ ಅಪರ್ಣಾ ಲಿಂಗರಾಜ ತೋಟದ ಆಯ್ಕೆಯಾಗಿದ್ದಾರೆ.

ಗದಗ ಜಿಲ್ಲಾ ಮಾಜಿ ಸೈನಿಕರ, ಪ್ಯಾರಾಮಿಲಿಟರಿ ಸಂಘದಿಂದ ಕಾರ್ಯಕ್ರಮ

# ಕಾರ್ಗಿಲ್ ವಿಜಯೋತ್ಸವದ ರಜತ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ ಮತ್ತು ಮಾಜಿ ಹಾಗೂ ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘ ಗದಗ ಜಿಲ್ಲೆ ಇವರ ಸಹಯೋಗದೊಂದಿಗೆ ಜುಲೈ 26ರಂದು ಕಾರ್ಗಿಲ್ ವಿಜಯೋತ್ಸವದ ರಜತ ಮಹೋತ್ಸವ ಹಾಗೂ ಯುದ್ಧದಲ್ಲಿ ಹುತಾತ್ಮ ವೀರ ಯೋಧರಿಗೆ ಗೌರವ ನಮನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

1962, 1965, 1971 ಮತ್ತು 1999ರ ಯುದ್ಧದಲ್ಲಿ ಹುತಾತ್ಮ ವೀರ ಯೋಧರಿಗೆ ಗೌರವ ನಮನ ಕಾರ್ಯಕ್ರಮವು ಮುಂಜಾನೆ 9 ಗಂಟೆಗೆ ಗದುಗಿನ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ಜರುಗಲಿದೆ. ನಂತರ ಗಾಂಧಿ ಸರ್ಕಲ್, ತೋಂಟದಾರ್ಯ ಮಠದ ಕಮಾನು, ತೋಂಟದಾರ್ಯ ಮಠ, ಮಹೇಂದ್ರಕರ ಸರ್ಕಲ್, ಬಸವೇಶ್ವರ ನಗರದ ಮಾರ್ಗವಾಗಿ ಕರ್ನಾಟಕ ಟಾಕೀಜ್ ಬಳಿ ಇರುವ ಕರ್ನಾಟಕ ರಾಜ್ಯ ಗದಗ ಜಿಲ್ಲಾ ನಿವೃತ್ತರ ಸಂಘದ ಕಾರ್ಯಾಲಯದಲ್ಲಿ 10 ಗಂಟೆಗೆ ವೇದಿಕೆಯ ಕಾರ್ಯಕ್ರಮ ನಡೆಯುವುದು.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಗೂಳಯ್ಯ ಮಾಲಗಿತ್ತಿಮಠ, ಮಾಜಿ ಮತ್ತು ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘ ಗದಗ ಜಿಲ್ಲಾಧ್ಯಕ್ಷ ನಾಗರಾಜ ಕುಂದರಗಿ ವಹಿಸುವರು. ಅತಿಥಿಗಳಾಗಿ ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಮಾಜಿ ಅಧ್ಯಕ್ಷರೂ ಹಾಲಿ ಗೌರವ ಅಧ್ಯಕ್ಷರೂ ಆದ ಅಂದಾನಪ್ಪ ಯರಗೇರಿ, ಮಾಜಿ ಮತ್ತು ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘದ ಗೌರವ ಅಧ್ಯಕ್ಷ ವ್ಹಿ.ಎಸ್. ಅಕ್ಕಿ ಆಗಮಿಸುವರು. ಮಾಜಿ ಯೋಧರು ಹಾಗೂ ವೀರನಾರಿಯರು ಮುಂಚಿತವಾಗಿ ಉಪಸ್ಥಿತರಿರಬೇಕೆಂದು ಉಭಯ ಸಂಘಟನೆಗಳ ಕಾರ್ಯದರ್ಶಿಗಳಾದ ಸಿ.ಜಿ. ಸೊನ್ನದ ಹಾಗೂ ಬಸಯ್ಯ ಹಿರೇಮಠ ವಿನಂತಿಸಿದ್ದಾರೆ.

ಸಮಾರಂಭದ ಸಾನ್ನಿಧ್ಯವನ್ನು ಕಳಸಾಪೂರ-ಸೊರಟೂರ-ಮಲ್ಲಸಮುದ್ರದ ಓಂಕಾರೇಶ್ವರ ಹಿರೇಮಠದ ಪೂಜ್ಯ ಫಕೀರೇಶ್ವರ ಪಟ್ಟಾಧ್ಯಕ್ಷರು ವಹಿಸುವರು. ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಚಾರ್ಯ ಹಾಗೂ ಜಿಲ್ಲಾ ನಿವೃತ್ತರ ಸಂಘದ ಅಧ್ಯಕ್ಷ ಕೆ.ಎಚ್. ಬೇಲೂರ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ಆಗಮಿಸುವರು.

ಮಹಿಳಾ-ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಸಭೆಯಲ್ಲಿ ಡಿಸಿ ಗೋವಿಂದ ರೆಡ್ಡಿ

# ಪ್ರಚಾರದ ಮೂಲಕ ಬಾಲ್ಯವಿವಾಹ ತಡೆಗಟ್ಟಿ

■ವಿಜಯಸಾಕ್ಷಿ ಸುದ್ದಿ, ಗದಗ

ಓರ್ವ ಪಾಲಕರನ್ನು ಹೊಂದಿದ ಮತ್ತು ಅನಾಥ ಮಕ್ಕಳಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನೀಡುವ ಸೌಲಭ್ಯಗಳು ಸಮರ್ಪಕವಾಗಿ ತಲುಪಬೇಕು ಎಂದು ಜಿಲ್ಲಾಧಿಕಾರಿ ಗೋವಿಂದ್ ರೆಡ್ಡಿ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್ ನಲ್ಲಿ ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ವಿವಿಧ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕ ಮಟ್ಟದ ವಿವಿಧ ಸಮಿತಿಯ ಸಭೆಗಳು ಕಡ್ಡಾಯವಾಗಿ ಜರಗಬೇಕು ಮತ್ತು ಬಾಲ ಮಂದಿರಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.



ಬಾಲ್ಯವಿವಾಹಗಳನ್ನು ತಡೆಗಟ್ಟಲು ಪ್ರೌಢ ಮತ್ತು ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ಬಾಲ್ಯವಿವಾಹದ ದುಷ್ಪರಿಣಾಮದ ಅರಿವನ್ನು ವ್ಯಾಪಕವಾಗಿ ಪ್ರಚಾರಮಾಡಬೇಕು. ಸಾಮೂಹಿಕ ಮದುವೆ ಜೊತೆಗೆ ವಯಕ್ತಿಕವಾಗಿ ನಡೆಯುವ ಮದುವೆಗಳ ಬಗ್ಗೆಯೂ ಗಮನ ಹರಿಸಬೇಕು. ಸಂಶಯ ಬಂದಲ್ಲಿ ಆಧಾರ್ ಕಾರ್ಡ್, ಶಾಲಾ ದಾಖಲಾತಿ, ವೈದ್ಯಕೀಯ ಪರೀಕ್ಷೆ ನಡೆಸಿ ಪರಿಶೀಲಿಸಬೇಕು ಎಂದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶಿವನಗೌಡ್ರ ಮಾತನಾಡಿ, ಪೊಲೀಸ್ ಇಲಾಖೆಯ ಚೆನ್ನಮ್ಮ ಪಡೆಯ ಮೂಲಕ ಎಲ್ಲಾ ಠಾಣೆ ಮತ್ತು ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹವಾಗದಂತೆ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದರು.

ಪೊಸ್ಕೊ ಪ್ರಕರಣಗಳನ್ನು ತಡೆಗಟ್ಟಲು ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ಉದ್ಯಾನವನದಲ್ಲಿ, ಆಟೋ ಚಾಲಕ, ಕಾರ್ಮಿಕರಲ್ಲಿ ಕಾಯ್ದೆಯ ಮಾಹಿತಿಯನ್ನು ತಿಳಿಸಿ ಅರಿವು ಮೂಡಿಸಬೇಕು ಎಂದು ನಿರ್ದೇಶನ ನೀಡಿದರು.

ಮಹಿಳಾ ಮತ್ತು ಮಕ್ಕಳ ರಕ್ಷಣಾಧಿಕಾರಿ ರಫೀಕಾ ಸಭೆಗೆ 2023-24ರ 4 ನೇ ತ್ರೈಮಾಸಿಕ ಮತ್ತು 2024-25 ನೇ ಸಾಲಿನ ನಡಾವಳಿಗಳನ್ನು ವಿವರಿಸಿದರು.

ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಣಾಧಿಕಾರಿ ಭರತ್ ಎಸ್ ಮಾತನಾಡಿ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ತರುವ ಪ್ರಯತ್ನವಾಗಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಕೆ. ಬೈಲೂರು, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರೆಡ್ಡೇರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

ಹೊಟೇಲ್ ಒಡೆಯರ ಸಂಘದ ವತಿಯಿಂದ ಯಕ್ಷಗಾನ ಆಯೋಜನೆ

# ಯಕ್ಷಗಾನ ಕೌಶಲ್ಯ ಪ್ರಮುಖ ಮಾಧ್ಯಮ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಮೆಕ್ಕೆಕಟ್ಟು ಮೇಳ ಕಳೆದ ವರ್ಷ ನಿರೀಕ್ಷೆಗೂ ಮೀರಿ ಕಾರ್ಯಕ್ರಮಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡುವ ಮೂಲಕ ಯಕ್ಷಗಾನ ಕ್ಷೇತ್ರದಲ್ಲಿ ಕ್ಷಿಪ್ರ ಕ್ರಾಂತಿಯನ್ನು ಮೆರೆದು, ಯುವ ಪೀಳಿಗೆಯಲ್ಲಿ ಯಕ್ಷಗಾನದ ಆಸಕ್ತಿಯನ್ನು ಹೆಚ್ಚಿಸಿದ್ದಾರೆಂದು ಗದಗ-ಬೆಟಗೇರಿ ಹೊಟೇಲ್ ಒಡೆಯರ ಸಂಘದ ಅದ್ಯಕ್ಷ ವಿಶ್ವನಾಥಶೆಟ್ಟಿ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದ ವೀರನಾರಾಯಣ ದೇವಸ್ಥಾನದ ಆವರಣದಲ್ಲಿ ಮಂಗಳವಾರ ಸಂಜೆ ಗದಗ-ಬೆಟಗೇರಿ ಹೊಟೇಲ್ ಒಡೆಯರ ಸಂಘ ಏರ್ಪಡಿಸಿದ್ದ ಶ್ರೀ ಮೆಕ್ಕೆಕಟ್ಟು ಮೇಳದ 'ಕವಿರತ್ನ ಕಾಳಿದಾಸ' ಯಕ್ಷಗಾನ ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪೌರಾಣಿಕ ಕಥೆಗಳನ್ನು ಆಧರಿಸಿ ಯಕ್ಷಗಾನದ ಮೂಲಕ ಜನರಲ್ಲಿ ಪ್ರಾಯೋಗಿಕವಾಗಿ ಐತಿಹಾಸಿಕ ಘಟನಾವಳಿಗಳನ್ನು ಬಿತ್ತರಿಸುವ




ಯಕ್ಷಗಾನ ಕೌಶಲ್ಯ ಇಂದಿನ ಪ್ರಮುಖ ಮಾಧ್ಯಮವಾಗಿದೆ. ಉತ್ತರ ಕರ್ನಾಟಕದ ಜನರಲ್ಲಿ ಯಕ್ಷಗಾನದ ಮಹತ್ವ, ಪ್ರಾಮುಖ್ಯತೆ ಮತ್ತು ಆಸಕ್ತಿ ಬಿತ್ತರಿಸುವ ಪ್ರಮುಖ ಉದ್ದೇಶದಿಂದಾಗಿಯೇ ಶ್ರೀ ಮೆಕ್ಕೆಕಟ್ಟು ಮೇಳವನ್ನು ಆಹ್ವಾನಿಸಲಾಗಿದೆ. ಈ ಭಾಗದ ಜನರಲ್ಲಿ ಯಕ್ಷಗಾನದ ರಸದೌತಣವನ್ನು ಉಣಬಡಿಸುವ ಉದ್ದೇಶದಿಂದ ಪ್ರತಿ ವರ್ಷ ಯಕ್ಷಗಾನ ಪ್ರದರ್ಶನ ನೆರವೇರಿಸುತ್ತಿದ್ದೇವೆ. ನಮ್ಮ ತವರಿನ ಯಕ್ಷಗಾನದ ಅಭಿರುಚಿ ಸವಿಯುವ ಉದ್ದೇಶ ನಮ್ಮದಾಗಿದ್ದು, ನಮ್ಮ ಆಸೆ, ಆಕಾಂಕ್ಷೆ ಈಡೇರಿಕೆಗಾಗಿ ಯಕ್ಷಗಾನ ಪ್ರದರ್ಶನವನ್ನು ಯಶಸ್ವಿಯಾಗಿ ನಿರ್ವಹಿಸುತ್ತಿರುವ ಸಂತೃಪ್ತಿ ನಮಗಿದೆ ಎಂದರು.

ಈ ಸಂದರ್ಭದಲ್ಲಿ ಮೇಳದ ಮುಖ್ಯಸ್ಥರಾದ ರಂಜಿತಶೆಟ್ಟಿ, ಉಪಾಧ್ಯಕ್ಷರಾದ ಸುಧಾಕರಶೆಟ್ಟಿ, ಜಯಪಾಲಶೆಟ್ಟಿ, ಉದಯಶೆಟ್ಟಿ, ಪುರುಷೋತ್ತಮ ಹೆಗಡೆ, ಕಾವೆಂಶ್ರೀ, ಸತೀಶ ಶೆಟ್ಟಿ, ರಣಜಿತಶೆಟ್ಟಿ, ಜಯದೇವ ಭಟ್ಟ, ಸುಧೀರ ಶೆಟ್ಟಿ, ರಾಜು ಪೂಜಾರಿ, ಯುವ ಗಣ್ಯ ಉದ್ಯಮಿ ಶಂಕರ ಮುಳಗುಂದ ಸೇರಿದಂತೆ ಹಲವರಿದ್ದರು.

ಇದೇ ಸಂದರ್ಭದಲ್ಲಿ ಜಲವಳ್ಳಿ ವಿದ್ಯಾಧರ ರಾವ್ ಅವರನ್ನು ಗದಗ ಹೊಟೇಲ್ ಒಡೆಯರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾವೆಂಶ್ರೀ ಕಾರ್ಯಕ್ರಮ ನಿರೂಪಿಸಿದರು. ಪುರುಷೋತ್ತಮ ಹೆಗಡೆ ವಂದಿಸಿದರು.

# ವಿದ್ಯುತ್ ಪ್ರವಹಿಸಿ ವಿದ್ಯಾರ್ಥಿ ಸಾವು

■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ಕುರುಡಗಿ ಗ್ರಾಮದಲ್ಲಿ ರವಿವಾರ ವಾಟರ್ ಮೋಟಾರ್ ಮೂಲಕ ನೀರು ಎತ್ತುವಾಗ ವಿದ್ಯುತ್ ಪ್ರವಹಿಸಿ ವೀರಾತಯ್ಯ ಸುರೇಶಯ್ಯ ಹಿರೇಮಠ(16) ಎನ್ನುವ ವಿದ್ಯಾರ್ಥಿ ಮೃತಪಟ್ಟಿದ್ದಾನೆ.

ಬೆಳಿಗ್ಗೆ 7.15ರ ಹೊತ್ತಿಗೆ ಗ್ರಾಮದ ಮನೆಯ ಹಿಂದಿನ ಹಿತ್ತಲಲ್ಲಿ ವಾಟರ್ ಮೋಟಾರ್ ಇಟ್ಟು ಮೋಟಾರ್ ಸ್ವಿಚ್‌ನ್ನು ಮನೆ ಹಿಂದಿನ ವಿದ್ಯುತ್ ಬೋರ್ಡ್‌ಗೆ ಹಾಕಿ ಸಿಂಟ್ಯಾಕ್ಸ್‌ಗೆ ನೀರು ಏರಿಸುವಾಗ ಮೋಟಾರ್ ಹಿಡಿದು ಅಕಾಸ್ಮತ್ ಆಗಿ ವಿದ್ಯುತ್ ಪ್ರವಹಿಸಿ ಕೆಳಗೆ ಬಿದ್ದಿದ್ದಾನೆ. ಬಳಿಕ ಆತನನ್ನು ಗದಗ ಚಿರಾಯು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ. ಆದರೆ ವೈದ್ಯರು ಪರೀಕ್ಷಿಸಿದಾಗ ಮೃತಪಟ್ಟಿರುವುದು ಧೃಡಪಟ್ಟಿರುವುದಾಗಿ ತಿಳಿಸಿದ್ದಾರೆ. ಈ ಕುರಿತು ನರೇಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




ಲಕ್ಷ್ಮೇಶ್ವರ ವೇದಿಕಾ ಭರತನಾಟ್ಯ ಶಾಲೆಯಲ್ಲಿ ಗುರುಪೂರ್ಣಿಮೆ ಕಾರ್ಯಕ್ರಮವನ್ನು ವಿಶೇಷವಾಗಿ ಆಚರಿಸಲಾಯಿತು. ಶಾಲೆಯ ಮಾರ್ಗದರ್ಶಕರಾದ ವಿ.ಹೇಮಾ ವಾಗ್ಮೋಡೆ ಮಕ್ಕಳಿಗೆ ಗುರುಪೂರ್ಣಿಮೆ ಆಚರಣೆಯ ಮಹತ್ವ ತಿಳಿಸಿದರು. ಶಾಲೆಯ ನಿರ್ದೇಶಕರಾದ ಸರೋಜಾ ಗೌಡರ ಸೇರಿ ಶಿಕ್ಷಕಿಯರು, ಮಕ್ಕಳು ಪಾಲ್ಗೊಂಡಿದ್ದರು.

# ಔಷಧಿ ವ್ಯಾಪಾರಸ್ಥರ ಸಂಘದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೋವಿಡ್ ಸೇರಿ ತುರ್ತು ಸಂದರ್ಭ ಸೇರಿ ಆರೋಗ್ಯಕರ, ಸ್ವಾಸ್ಥ್ಯ ಸಮಾಜ ನಿರ್ಮಾಣದ ಸಂದರ್ಭದಲ್ಲಿ ಔಷಧಿ ವ್ಯಾಪಾರಸ್ಥರು ನೀಡುವ ಸೇವೆಯನ್ನು ಸಮಾಜ ಸ್ಮರಿಸುತ್ತದೆ ಎಂದು ಗದಗ ತಾಲೂಕಾ ಔಷಧಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಆರ್.ಬಿ. ದಾನಪ್ಪಗೌಡ್ರ ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ನೂತನ ಔಷಧಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಔಷಧಿ ವ್ಯಾಪಾರಸ್ಥರು



ಕೇವಲ ಸ್ವಂತ ಲಾಭಕ್ಕಾಗಿ ಅಲ್ಲದೇ ಸೇವಾ ಮನೋಭಾವ ಹೊಂದಿರುತ್ತಾರೆ. ಸ್ಪರ್ಧಾತ್ಮಕ ಜಗತ್ತಿನ ಔಷಧಿ ವ್ಯಾಪಾರಸ್ಥರ ಸೇವೆ ಕಷ್ಟದಾಯಕವಾಗಿದ್ದು, ಸರ್ಕಾರ ನಮ್ಮ ಹಿತರಕ್ಷಣೆಗೆ ಬದ್ಧರಾಗಬೇಕು. ಅಲ್ಲದೇ ವ್ಯಾಪಾರಸ್ಥರು ಒಗ್ಗಟ್ಟು ಮತ್ತು ಸಂಘಟಿತರಾಗಬೇಕು ಎಂದರು.

ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಾ ಔಷಧಿ ವ್ಯಾಪಾರಿಗಳ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ಚಂದ್ರಶೇಖರಗೌಡ ಪಾಟೀಲ ಮಾತನಾಡಿ, ಸಂಘಟನಾ ಶಕ್ತಿಯಿಂದ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಿಕೊಳ್ಳಬಹುದಾಗಿದ್ದು, ಎಲ್ಲರೂ ಒಗ್ಗಟ್ಟಿನಿಂದಿರೋಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ನಮ್ಮದೇ ಆದ ಸಮಾಜ ಸೇವೆ ಮಾಡೋಣ ಎಂದರು.

ಉಪಾಧ್ಯಕ್ಷರಾಗಿ ಶ್ರೀಕಾಂತ ಕೊಪ್ಪದ, ಜೀನದತ್ತ ಹರೆಗೌಡ್ರ, ವಿನಾಯಕ ಹೆಬ್ಬಳ್ಳಿ, ಪ್ರ.ಕಾರ್ಯದರ್ಶಿಯಾಗಿ ಆನಂದ ಓದು, ಸಹ ಕಾರ್ಯದರ್ಶಿಯಾಗಿ ರೇಖಾ ಪಾಟೀಲ, ರಾಘವೇಂದ್ರ ಕಮ್ಮಾರ, ಖಜಾಂಚಿಯಾಗಿ ಮಲ್ಲಿಕಾರ್ಜುನ ದಡ್ಡೂರ ಆಯ್ಕೆಯಾದರು. ಈ ವೇಳೆ ಜಿಲ್ಲಾ ಖಜಾಂಚಿ ಪ್ರಭು ಕಾಬಳ್ಳಿ ಸೇರಿ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಎಲ್ಲಾ ಔಷಧಿ ವ್ಯಾಪಾರಸ್ಥರ ಸಂಘದ ಸದಸ್ಯರು ಇದ್ದರು.

ಪುರಸಭೆ ಮುಖ್ಯಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ

# ಶಾಶ್ವತ ಕುಡಿಯುವ ನೀರಿನ ಯೋಜನೆ ಜಾರಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣಕ್ಕೆ ಹಮ್ಮಿಗಿ ಡ್ಯಾಮಿನ ಹಿನ್ನೀರಿನ ಗುಮ್ಮಗೊಳ ಗ್ರಾಮದಿಂದ ಶಾಶ್ವತ ಕುಡಿಯುವ ನೀರಿನ ಯೋಜನೆಯನ್ನು ಜಾರಿಗೊಳಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ಬುಧವಾರ ಪುರಸಭೆ ಮುಖ್ಯಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಶರಣು ಗೋಡಿ ಮಾತನಾಡಿ, ಪಟ್ಟಣದಲ್ಲಿ ಸುಮಾರು 25 ವರ್ಷಗಳ ಹಿಂದೆ ಜಿಲ್ಲೆಯಲ್ಲಿ ಹರಿದಿರುವ ತುಂಗಭದ್ರಾ ನದಿಯಿಂದ ಹಾವೇರಿ ಜಿಲ್ಲೆಯ ಮೇವುಂಡಿ ಜಾಕ್‌ವೆಲ್‌ನಿಂದ ನಗರಕ್ಕೆ ಕುಡಿಯುವ ನೀರಿನ ಯೋಜನೆ ಸಾಕಾರವಾಗಿತ್ತು. ಆದರೆ 25 ವರ್ಷಗಳಿಂದಲೂ ಅದೇ ಹಳೆ ಪೈಪ್‌ಲೈನ್‌ಗಳ ಮೂಲಕ ನೀರು ಬರುತ್ತಿದ್ದು, ಈ ಪೈಪ್‌ಗಳು ಬಹುತೇಕ ತುಕ್ಕು ಹಿಡಿದು




ಎಲ್ಲೆಡೆ ಸೋರಿಕೆಯಾಗುತ್ತಿವೆ. ಬೇಸಿಗೆ ಕಾಲದಲ್ಲಿ ಮೇವುಂಡಿ ಜಾಕವೆಲ್‌ವರೆಗೂ ತುಂಗಭದ್ರಾ ನದಿಯ ನೀರು ಬರುವದು ನಿಂತು ಹೋಗಿ ಪಟ್ಟಣದಲ್ಲಿ ನೀರಿನ ಹಾಹಾಕಾರ ಪ್ರಾರಂಭವಾಗುತ್ತದೆ.

ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಪದಾಧಿಕಾರಿಗಳಾದ ಇಸ್ಮಾಯಿಲ್ ಆಡೂರ, ನಾಗೇಶ ಅಮರಾಪುರ, ಪ್ರವೀಣ ಆಚಾರಿ, ಮೈನುದ್ದಿನ ಮನಿಯಾರ, ಯಲ್ಲಪ್ಪ ಹಂಜಗಿ, ಮಹಮ್ಮದಅಲಿ ಶಿಗ್ಗಾಂವ, ವಿನಾಯಕ ಚಿತ್ರಬಾವಿ, ನಾಗರಾಜ ಅಣ್ಣಿಗೇರಿ, ಅಭಿಷೇಕ ಸಾತಪುತೆ, ರುಕ್ಮಾನ ಬೆಟಗೇರಿ, ಯಲ್ಲಪ್ಪಗೌಡ ಮುದ್ನರ, ಸಂತೋಷ ರಾಠೋಡ, ಅಷ್ಪಾಕ ಬಾಗೋಡಿ, ವಿನಾಯಕ ಕಟವಟೆ, ನಾಗರಾಜ ಬನ್ನಿ, ಪ್ರಕಾಶ ತೇರದಾಳ, ಆಶೀಪ ಯಲಿವಾರ, ವಿನಾಯಕ ಸಂಶಿ ಸೇರಿದಂತೆ ಸಂಘಟನೆಯ ಜಿಲ್ಲಾ ಘಟಕ ಮತ್ತು ಲಕ್ಷ್ಮೇಶ್ವರ ತಾಲೂಕು ಘಟಕದ ಪದಾಧಿಕಾರಿಗಳು ಇದ್ದರು.

50-60 ಸಾವಿರ ಜನಸಂಖ್ಯೆಯನ್ನು ಹೊಂದಿರುವ ಪಟ್ಟಣವು ವ್ಯಾಪಾರ, ಶಿಕ್ಷಣ ಸೇರಿದಂತೆ ಪ್ರಗತಿಯಲ್ಲಿ ಸಾಗುತ್ತಿದೆ. ನಿತ್ಯ ಸಾವಿರಾರು ಜನರು ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸುತ್ತಿದ್ದು, ಅವರಿಗೆ ಹಾಗೂ ಪಟ್ಟಣದಲ್ಲಿನ ಜನರಿಗೆ ಮುಖ್ಯವಾಗಿ ಕುಡಿಯುವ ನೀರು ಪೂರೈಸುವದು ದುಸ್ತರವಾಗುತ್ತಿದೆ. ಆದ್ದರಿಂದ ಹಮ್ಮಿಗಿ ಡ್ಯಾಮಿನ ಹಿನ್ನೀರಿನ ಪ್ರದೇಶವಾದ ಗುಮ್ಮಗೋಳದಿಂದ ನಗರಕ್ಕೆ ಶಾಶ್ವತವಾದ ಕುಡಿಯುವ ನೀರಿನ ಯೋಜನೆಯನ್ನು ಜಾರಿಗೊಳಿಸಬೇಕೆಂದು ಅಗ್ರಹಿಸಿದರು.


ಕರ್ನಾಟಕ ಸರಕಾರ

**ಪಟ್ಟಣ ಪಂಚಾಯತ ಕಾರ್ಯಾಲಯ, ನರೇಗಲ**

ನಂ:ಪಪಂನ/ಅಲ್ಪವಾಧಿ/ಇ-ಟೆಂಡರ/ವಹಿ/2024-25 ದಿನಾಂಕ: 24-07-2024

**ಇ-ಟೆಂಡರ ಪ್ರಕಟಣೆ 2 ನೇ ಕರೆ**

ನರೇಗಲ್ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ನರೇಗಲ್ ಇವರು ಕರ್ನಾಟಕ ರಾಜ್ಯಪಾಲರ ಪರವಾಗಿ ಕರ್ನಾಟಕ ಪಾರದರ್ಶಕತೆ ಸಾರ್ವಜನಿಕ ಸಂಗ್ರಹಣೆ ಅಧಿನಿಯಮ 2000 ರನ್ವಯ ಕೆ.ಡಬ್ಲ್ಯೂ-1 ರ ನಿಯಮಾವಳಿಗಳಂತೆ ಈ ಕೆಳಕಂಡ ಕಾಮಗಾರಿಗಳಿಗೆ ಕರ್ನಾಟಕ ಸರ್ಕಾರದ ಇ-ಪ್ರಕ್ಯೂರಮೆಂಟ್ ಪೋರ್ಟಲ್ ಮೂಲಕ https://kppp.karnataka.gov.in ನಲ್ಲಿ ಪಿ.ಡಬ್ಲ್ಯೂ.ಡಿ ಯಲ್ಲಿ ನೊಂದಣಿ ಮಾಡಿದ ಅರ್ಹ ಟೆಂಡರ್‌ದಾರರಿಂದ ಟೆಂಡರನ್ನು ಅಹ್ವಾನಿಸಲಾಗಿದೆ. ಟೆಂಡರ ಫಾರಂ ಹಾಗೂ ಇ.ಎಂ.ಡಿ ಮೊತ್ತವನ್ನು ಇ-ಪ್ರಕ್ಯೂರಮೆಂಟ್ ಪೋರ್ಟನಲ್ಲಿ ಸೂಚಿಸಲಾಗಿದೆ.

| Sl | Scheme | Amount | Indents | Category |
|---|---|---|---|---|
| 1 | 15TH FINANCE UNTIED 2023-24 | 10.00 | 12705/Call-2 | OTHERS |
| 2 | 15TH FINANCE UNTIED 2023-24 | 7.00 | 12739/Call-2 | OTHERS |
| 3 | SFC UNTIED 2023-24 | 19.04 | 12730/Call-2 | OTHERS |
| 4 | 15TH FINANCE UNTIED 2023-24 | 10.00 | 12715/Call-2 | OTHERS |
| 5 | 15TH FINANCE UNTIED 2023-24 | 16.00 | 12684/Call-2 | SC |
| 6 | 15TH FINANCE UNTIED 2023-24 | 11.00 | 12679/Call-2 | OTHERS |
| 7 | 15TH FINANCE TIED 2023-24 AND 2021-22 15TH FINANCE NMPC | 10.00 | 12700/Call-2 | OTHERS |
| 8 | SFC 7.25% 2023-24 | 0.80 | 12839/Call-2 | OTHERS |
| 9 | SFC SCSP 2023-24 | 3.64 | 12840/Call-2 | OTHERS |
| 10 | SFC TSP 2023-24 | 1.40 | 12917/Call-2 | ST |
| 11 | 15TH TIDE FINANCE 2023-24 | 3.00 | 12842/Call-2 | SC |
| 12 | SFC DRNK 1ST INST 2023-24 | 1.25 | 12916/Call-2 | OTHERS |
| 13 | SBM 2.0 2023-24 SENT FOR DTS | 11.49 | 9633/CALL-3 | OTHERS |
| 14 | SBM 2.0 2023-24 SENT FOR DTS | 3.75 | 9671/CALL-3 | OTHERS |
| 15 | SBM 2.0 2023-24 | 12.50 | 9580/CALL-3 | OTHERS |
| 16 | SBM 2.0 2023-24 | 12.10 | 9673/CALL-3 | OTHERS |
| 17 | 15th FINANCE 2021-22 | 8.50 | 4397/CALL-3 | OTHERS |
| 18 | 15th FINANCE 2020-21 | 16.12 | 1487/Call-2 | OTHERS |
| 19 | SCSP 2022-23 | 1.00 | 12835 (CALL-3) | OTHERS |
| 20 | SFC DRINKIG WATER 2021-22 | 2.50 | 12883 (CALL-3) | OTHERS |
| 21 | 2020-21 15th FIANCE | 2.00 | 12885 (ST CALL-2) | ST |

(1) ಟೆಂಡರಗಳನ್ನು ಆನಲೈನ್‌ನಲ್ಲಿ ಇ-ಪ್ರಕ್ಯೂರಮೆಂಟ್ ಪೋರ್ಟಲ ಮೂಲಕ ಸಲ್ಲಿಸಲು ಕೊನೆಯ **ದಿನಾಂಕ: 07-08-2024 ಸಂಜೆ 5.30 ಘಂಟೆಯವರೆಗೆ** (2) ಟೆಂಡರಗಳನ್ನು ಇ-ಪ್ರಕ್ಯೂರಮೆಂಟ್ ಪೋರ್ಟಲ್ ಮಾರ್ಗಸೂಚಿಗಳಂತೆ **ದಿನಾಂಕ: 09-08-2024** ಬೆಳಿಗ್ಗೆ ತೆರೆಯಲಾಗುವುದು. (3) ಟೆಂಡರಗಳನ್ನು ಇ-ಪ್ರಕ್ಯೂರಮೆಂಟ್ ಪೋರ್ಟಲ್ ಮಾರ್ಗಸೂಚಿಗಳಂತೆ **ದಿನಾಂಕ: 13-08-2024** ಬೆಳಿಗ್ಗೆ ತೆರೆಯಲಾಗುವುದು. (4) ಪ್ಯಾಕೇಜ್ ವಿವರಗಳು, ಟೆಂಡರ ಷರತ್ತುಗಳು ಹಾಗೂ ನಿಬಂಧನೆಗಳಿಗಾಗಿ ಕಛೇರಿ ವೇಳೆಯಲ್ಲಿ ತಾಂತ್ರೀಕ ವಿಭಾಗದಲ್ಲಿ ಪಡೆಯಬಹುದಾಗಿದೆ. (5) ಕಾಮಗಾರಿ ಪೂರ್ಣಗೊಳಿಸಲು ನಿಗಧಿಗೊಳಿಸಿರುವ ಕಾಲಾವಧಿ (ಮಳೆಗಾಲ ಸೇರಿ): 4 ತಿಂಗಳು. (6) As Per Govt. Order No. PWD65RDF2017 Date : 11-10-2018 ರನ್ವಯ ಶೇಕಡಾ 18% ರಷ್ಟು ಜಿ.ಎಸ್.ಟಿ ಗುತ್ತಿಗೆದಾರರಿಗೆ ಪ್ರತ್ಯೇಕವಾಗಿ ಪಾವತಿಸಲಾಗುವುದು. (7) ಪಟ್ಟಣ ಪಂಚಾಯತ ನರೇಗಲ್ಲ ಟೆಂಡರನ್ನು ಮಂಜೂರಿಸುವ ಅಥವಾ ತಿರಸ್ಕರಿಸುವ ಅಧಿಕಾರವನ್ನು ಕಾಯ್ದಿರಿಸಿಕೊಂಡಿದೆ.

ಸಹಿ/- ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ನರೇಗಲ್

ಸಹಿ/- ಆಡಳಿತಾಧಿಕಾರಿಗಳು
ಪಟ್ಟಣ ಪಂಚಾಯತ ನರೇಗಲ್

ವಾ.ಸಾ.ಇ/ಗದಗ/110/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka